

# ಸಿಹಿ ಕಹಿ

SK NEWS ಕನ್ನಡ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

Volume : 07 Issue : 55 Saturday 02-11-2024 E-mail : maruti.b.hosamani76@gmail.com Page: 4 Price : Rs. 1/-


## ಕನ್ನಡ ಭಾಷೆ ಉಳಿಸಿ ಬೆಳೆಸಿ: ಶಾಸಕ ಜಿ.ಎಚ್ ಶ್ರೀ ನಿವಾಸ್





**ಸಿಹಿ ಕಹಿ ಸುದ್ದಿ**

**ತರೀಕೆರೆ :** ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ಇದೆ, ಎಂಟು ಜನರಿಗೆ ಜ್ಞಾನಪೀಠ ಪ್ರಶಸ್ತಿಗಳು ಲಭಿಸಿವೆ ಎಂದು ಶಾಸಕರಾದ ಜಿಎಚ್ ಶ್ರೀನಿವಾಸ್ ಹೇಳಿದರು. ಅವರು ಇಂದು ರಾಷ್ಟ್ರೀಯ ಹಬ್ಬಗಳ ಆಚರಣ ಸಮಿತಿ, ಬಯಲು ರಂಗ ಮಂದಿರದಲ್ಲಿ ಏರ್ಪಡಿಸಿದ್ದ 69 ನೇ. ಕನ್ನಡ ರಾಜ್ಯೋತ್ಸವ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕರ್ನಾಟಕ ಸಂಭ್ರಮದ ಸರ್ಕಾರವು 7.5 ಕೋಟಿ ಅನುದಾನದಲ್ಲಿ ಬಸ್ ನಿಲ್ದಾಣ ನಿರ್ಮಾಣಕ್ಕೆ ಮಂಜೂರಾತಿ ಮಾಡಿದೆ, ಪುರಸಭೆಯ ಕಟ್ಟಡ ನಿರ್ಮಾಣಕ್ಕೆ 7.5 ಕೋಟಿ ಅನುದಾನ ಮತ್ತು ಕುಡಿಯುವ ನೀರು ನಿರಂತರವಾಗಿ ಸಿಗುವಂತೆ ಮಾಡಲಾಗಿದೆ, ತರೀ-ಕೆರೆ ಪಟ್ಟಣದಲ್ಲಿ ಯುಜಿಡಿ ಕಾಮಗಾರಿಗೆ 34 ಕೋಟಿ ರೂ ಮಂಜೂರಾತಿಯಾಗಿದೆ, ಆಟದ ಮೈದಾನಕ್ಕೆ ಒಂದುವರೆ ಕೋಟಿ, ಅಜ್ಜಂಪುರದಲ್ಲಿ ಬಸ್ ನಿಲ್ದಾಣ, ಇಂದಿರಾ ಕ್ಯಾಂಟೀನ್, ಮಿನಿ ವಿಧಾನ ಸೌಧ ನಿರ್ಮಾಣ ಮಾಡಲಾಗುವುದು ಈ ಎಲ್ಲಾ ಕಾಮಗಾರಿಗಳ ಉದ್ಘಾಟನೆಯನ್ನು ಮಾನ್ಯ ಮುಖ್ಯ ಮಂತ್ರಿಗಳಿಂದ ಶಂಕುಸ್ಥಾಪನೆ ಉದ್ಘಾಟನೆ ನೆರವೇರುವುದು. 15000 ಮನೆಗಳಿಗೆ ಖಾತೆ ದಾಖಲಾತಿ ಇಲ್ಲದೆ ಮನೆಗಳನ್ನು ಖಾತೆ ಮಾಡುವ ಬಗ್ಗೆ ಎರಡು ಬಾರಿ ವಿಧಾನ ಸಭೆಯಲ್ಲಿ ಚರ್ಚಿಸಿದ್ದೇನೆ. ಮತ್ತು ಮನೆ ನಿವೇಶನ ರಹಿತರಿಗೆ ಮನೆ ನಿವೇಶನಗಳನ್ನು ಕೊಡಲು ಕ್ರಮ ವಹಿಸಿರುತ್ತೇನೆ ಎಂದು ಹೇಳಿದರು. ಧ್ವಜಾರೋಹಣ ನೆರವೇರಿಸಿದ ಉಪ ವಿಭಾಗ ಅಧಿಕಾರಿ ಡಾ, ಕೆ.ಜೆ ಕಾಂತರಾಜ್, ರಾಜ್ಯೋತ್ಸವ ಸಂದೇಶವನ್ನು ನೀಡುತ್ತಾ ಮಾತನಾಡಿ ಕನ್ನಡ ನಾಡು ನುಡಿಯ ಬಗ್ಗೆ ದಾಸ ಸಾಹಿತ್ಯ,ವಚನ ಸಾಹಿತ್ಯ,ಕೀರ್ತನಗಳು ಮತ್ತು ಜಾನಪದ ಸಾಹಿತ್ಯ ಈ ಮಣ್ಣಿನ,ನಾಡಿನ ಸೊಬಗನ್ನು ಸಾರಿವೆ. ಕನ್ನಡ ನಾಡನ್ನು ಗಂಗರು, ಕದಂಬರು, ರಾಷ್ಟ್ರಕೂಟರು, ಪಾಳೇಗಾರರು ಆಳ್ವಿಕೆ ಮಾಡಿದ ಇತಿಹಾಸವಿದೆ. ಅತಿ ದೊಡ್ಡ ಜನಸಂಖ್ಯೆ ಹೊಂದಿದ ರಾಜ್ಯ ನಮ್ಮದು. ಚಿಕ್ಕಮಗಳೂರು ಜಿಲ್ಲೆ ಸುಂದರ ಪ್ರಕೃತಿಯನ್ನು ಹೊಂದಿದೆ ಜಿಲ್ಲೆಯ ಮುಗಳಿ ಲಕ್ಷ್ಮಿದೇವಮ್ಮ ಕಡೂರಿನ ತಂಗಲಿ ತಾಂಡದ ಬಿ.ಟಿ ಲಲಿತಾ ನಾಯಕ್ ರವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ. ನಾಡಿಗೆ 8 ಜ್ಞಾನಪೀಠ ಪ್ರಶಸ್ತಿಗಳು ಲಭಿಸಿವೆ, ರಾಷ್ಟ್ರ ಕವಿ ಕುವೆಂಪುರವರು ಉದಯವಾಗಲಿ ಚೆಲುವ ಕನ್ನಡ ನಾಡು ಎಂದು ಹಾಡಿದ್ದಾರೆ, ನಿರಂತರವಾಗಿ ಎಲ್ಲರೂ ಕನ್ನಡ ಭಾಷೆಯನ್ನು ಆಡಬೇಕು ಕನ್ನಡವನ್ನು ಉಳಿಸಿ, ಬಳಸಿ, ಬೆಳೆಸಬೇಕು ಎಂದು ಕರೆ ಕೊಟ್ಟರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪುರಸಭಾ ಅಧ್ಯಕ್ಷರಾದ ವಸಂತ್ ಕುಮಾರ್ ಕವಾಲಿ, ಉಪಾಧ್ಯಕ್ಷರಾದ ಗಿರಿಜಾ ಪ್ರಕಾಶ್ ವರ್ಮಾ, ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ರವಿ ದಳವಾಯಿ, ಮಾತನಾಡಿದರು. ವೇದಿಕೆಯಲ್ಲಿ ಪೊಲೀಸ್ ಉಪ ಅಧೀಕ್ಷಕರಾದ ಹಾಲಮೂರ್ತಿ ರಾವ್ ವಿ ಎಸ್, ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿಯದ ಡಾ, ಆರ್ ದೇವೇಂದ್ರಪ್ಪ, ಪುರಸಭಾ ಮುಖ್ಯ ಅಧಿಕಾರಿ ಪ್ರಶಾಂತ್, ಕ್ಷೇತ್ರ ಶಿಕ್ಷಣಾಧಿಕಾರಿ ಪರಶುರಾಮಪ್ಪ, ವಲಯ ಅರಣ್ಯ ಅಧಿಕಾರಿ ಉಮ್ಮರ್ ಪಾಷಾ, ಪೊಲೀಸ ನಿರೀಕ್ಷೆಕರಾದ ರಾಮಚಂದ್ರ ನಾಯಕ್, ತಹಸಿಲ್ದಾರ್ ಗ್ರೇಡ್ 2 ರುಕ್ಸಾನ ಹುದಾ, ಆರ್ಎಫ್ಒ ಆಸಿಫ್ ಅಹಮದ್ ಉಪಸ್ಥಿತರಿದ್ದು, ಸಾಧಕರಿಗೆ ಸನ್ಮಾನ ಮಾಡಲಾಯಿತು. ವಿವಿಧ ಶಾಲಾ ಮಕ್ಕಳಿಂದ ನೃತ್ಯ ರೂಪಕಗಳನ್ನ ನಡೆಸಲಾಯಿತು, ಶಿಕ್ಷಕರಾದ ಶಿಲ್ಪ ಹಾಗೂ ಕವಿತಾ ಮತ್ತು ದೈಹಿಕ ಶಿಕ್ಷಣ ಪರೀವೀಕ್ಷಕರಾದ ವೇದಮೂರ್ತಿ ನಿರೂಪಿಸಿದರು. ತಹಸಿಲ್ದಾರ್ ವಿಶ್ವಜಿತ್ ಮೆಹತಾ ರವರು ಸ್ವಾಗತಿಸಿ ವಂದಿಸಿದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನೆಲ್:ಎನ್. ವೆಂಕಟೇಶ್.ತರೀಕೆರೆ. ಚಿಕ್ಕಮಗಳೂರು**

## ಪಿ.ಎಂ. ಶ್ರೀ ಶಾಲೆಯಲ್ಲಿ ಕರ್ನಾಟಕ ರಾಜ್ಯೋತ್ಸವ ಆಚರಣೆ

**ಸಿಹಿ ಕಹಿ ಸುದ್ದಿ**

**ಮಾನ್ವಿ :** ಸಮೀಪದ ಸ.ಹಿ.ಮಾ ಶಾಲೆ (ಪಿ.ಎಮ್.ಶ್ರೀ) ನೀರಮಾನ್ವಿ ಶಾಲೆಯಲ್ಲಿ ವಿಶೇಷವಾಗಿ 70 ಸಸಿ ನಾಟಿ ಮಾಡುವ ಮೂಲಕ ಕರ್ನಾಟಕ ರಾಜ್ಯೋತ್ಸವ ಆಚರಿಸಲಾಯಿತು. ಧ್ವಜಾರೋಹಣ ನೆರವೇರಿಸಿ ಮುಖ್ಯ ಗುರುಗಳಾದ ಸತೀಶ್ ಮಾತನಾಡಿ ನಮ್ಮ ಚೆಲುವ ಕನ್ನಡ ನಾಡು ಗಂಧದ ಬೀಡು ಕವಿಗಳ ತವರೂರು ನಿತ್ಯ ಹರಿದ್ವರ್ಣ ವಾತಾವರಣ ಹೊಂದಿದೆ ಹಾಗೆ ಅಖಂಡ ಕರ್ನಾಟಕ ಹೊಂದಾಣಿಕೆ ಮಾಡಲು ಆಲೂರು ವೆಂಕಟರಾಯರು ಬಹಳ ಶ್ರಮ ಪಟ್ಟಿದ್ದಾರೆ ಅನ್ಯ ಭಾಷೆಗಳನ್ನು ಪ್ರೀತಿಸಿ ಕನ್ನಡವನ್ನು ಉಸಿರಾಗಿಸಿ ಕೊಳ್ಳಿ ಹಾಗೆ ಎಲ್ಲಾ ಭಾಷೆಗಳ ಮೇಲೆ ಪ್ರೀತಿಯ ಇರಬೇಕು ಕನ್ನಡ ಭಾಷೆಯ ಮೇಲೆ ಅಕ್ಕರೆ ಇರಲಿ ಶಿಕ್ಷಕಿ ಸಾವಿತ್ರಮ್ಮ ಮಾತನಾಡಿ ದಿನ ಬಳಕೆಯ ಪದಗಳಾದ ಅಮ್ಮ ಅಪ್ಪ ತಾತ ಮಾಮ ಎನ್ನುವ ಪದಗಳು ರೂಢಿಯಲ್ಲಿರ ಬೇಕು ಯಾವುದೆ ಕಾರಣಕ್ಕೆ ನಾವು ರೂಡಿಯಲ್ಲಿ ಆಂಗ್ಲ ಭಾಷೆಯನ್ನು ಬಳಸ ಬಾರದು ಎಲ್ಲಾದರೂ ಇರು ಎಂತಾದರು



ಇರು ನೀ ಎಂದಿಗೂ ಕನ್ನಡವಾಗಿರು ಇಂದಿನ ವಿಶೇಷ ತಾಲೂಕ ಉತ್ತಮ ಶಿಕ್ಷಕಿ ಪ್ರಶಸ್ತಿ ಪಡೆದ ಶ್ರೀಮತಿ ಲಕ್ಷ್ಮಿ ರವರಿಗೆ ಶಾಲೆಯ ಶಿಕ್ಷಕರು ಹಾಗೂ ಹಳೆ ವಿದ್ಯಾರ್ಥಿಗಳು ಸನ್ಮಾನ ಮಾಡಿದರು. ಕರ್ನಾಟಕ ರಾಜ್ಯ ಬೇಡರ ಸಮಿತಿ (ರಿ) ಬೆಂಗಳೂರು ನೀರಮಾನ್ವಿ ಘಟಕದ ಪದಾಧಿಕಾರಿಗಳು ಹಾಗೂ ಶ್ರೀ ವಾಲ್ಮೀಕಿ ಮಹಿಳಾ ಸ್ವಸಹಾಯ ಸಂಘ ನೀರಮಾನ್ವಿ ಪದಾಧಿಕಾರಿಗಳು ಸನ್ಮಾನ ಮಾಡಿ ಗೌರವಿಸಿದರು. ನಂತರ ಶಾಲಾ ಮಕ್ಕಳಿಂದ ಕನ್ನಡ ಗೀತೆಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆದು ಪಾಲಕರನ್ನು ಕನ್ನಡ ಅಭಿಮಾನಿಗಳನ್ನು ರಂಜಿಸಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಅತಿಥಿ ಶಿಕ್ಷಕರು ಹಾಗೂ ಗ್ರಾಮದ ಹಳೆಯ ಹಿರಿಯ ವಿದ್ಯಾರ್ಥಿಗಳು ಯುವ ಮುಖಂಡರು ಹಾಜರಿದ್ದು ಕಾರ್ಯಕ್ರಮ ನಿರೂಪಣೆ ಶ್ರೀಮತಿ ಲಕ್ಷ್ಮಿ ನೆರವೇರಿಸಿದರೆ ವಂದನಾರ್ಪಣೆ ರತ್ನಮ್ಮ ನೆರವೇರಿಸಿದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಹುಸೇನ್.ಭಾಷಾ.ನಕ್ಕುಂದಿ.ಮಾನ್ವಿ**

## ಶ್ರೀ ಗುರು ಕೊಟ್ಟೂರೇಶ್ವರ ದೇವಸ್ಥಾನಕ್ಕೆ ಪ್ರಭಾರಿ ಕಾರ್ಯ ನಿರ್ವಹಣಾಧಿಕಾರಿ ವಿ.ಹನುಮಂತಪ್ಪ ನೇಮಕ

**ಸಿಹಿ ಕಹಿ ಸುದ್ದಿ**

**ಕೊಟ್ಟೂರು :** ಪಟ್ಟಣದ ಆರಾಧ್ಯ ದೈವವಾದ ಶ್ರೀ ಗುರು ಕೊಟ್ಟೂರೇಶ್ವರ ದೇವಸ್ಥಾನ ಮತ್ತು ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನ ಪ್ರಭಾರಿ ಕಾರ್ಯ ನಿರ್ವಹಣಾಧಿಕಾರಿಯಾಗಿ ವಿ. ಹನುಮಂತಪ್ಪ ಅವರು ತಾತ್ಕಾಲಿಕವಾಗಿ ಹುದ್ದೆಯಲ್ಲಿ ಮುಂದುವರೆಯಲಿದ್ದಾರೆ.



ಸರ್ಕಾರದ ಮುಂದಿನ ಆದೇಶದವರೆಗೆ ಅಧಿಕಾರದಲ್ಲಿರುವುದಾಗಿ ತಿಳಿಸಿದರು. ಶ್ರೀ ಗುರು ಕೊಟ್ಟೂರೇಶ್ವರ ಸ್ವಾಮಿಯ ದರ್ಶನ ಪಡೆದು ಶ್ರೀ ಸ್ವಾಮಿಯ ಶ್ರೇಯ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪಿ.ಹೆಚ್ ದೊಡ್ಡ ರಾಮಣ್ಣ ಮಾಜಿ ಉಪಾಧ್ಯಕ್ಷರು ಜಿಲ್ಲಾ ಪಂಚಾಯಿತಿ ಹಾಗೂ ಕಾಂಗ್ರೆಸ್ ಮುಖಂಡರು ಮಲ್ಲನಾಯಕನಹಳ್ಳಿ ಕೊಟ್ರಯ್ಯ ಸಹ ಧರ್ಮಕರ್ತರು ಪರಮೇಶ್ವರಯ್ಯ ಕೆ ಅಯ್ಯನಳ್ಳಿ ಪ್ರದೀಪ್, ಕಾರ್ತಿಕ್, ಹಾಗೂ ದೇವಸ್ಥಾನದ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್. ಕೆ ನ್ಯೂಸ್ ಕನ್ನಡ ಚಾನೆಲ್: ಪ್ರದೀಪ್.ಕುಮಾರ್.ಸಿ.ಕೊಟ್ಟೂರು**

## ಬಣ್ಣಗಳ ಪರಿಚಯಕ್ಕೆ ವಿಶೇಷ ಕಾರ್ಯಕ್ರಮ



**ರಬಕವಿ-ಬನಹಟ್ಟಿ :** ಪುಟಾಣಿಗಳಿಗೆ ಬಣ್ಣದ ಮಾಹಿತಿ ಒದಗಿಸುವ ನಿಟ್ಟಿನಲ್ಲಿ ಪ್ರಾಯೋಗಿಕವಾಗಿ ವಿನೂತನ ಕಾರ್ಯಕ್ರಮ ಆಯೋಜಿಸುವ ಮೂಲಕ ಜ್ಞಾನ ತುಂಬುವ ಕಾರ್ಯ ಮಾಡುವಲ್ಲಿ ಶಿಕ್ಷಣ ಕಲಿಕಾ ಸಂಸ್ಥೆ ಮುಂದಾಗಿರುವದು ವಿಶೇಷ.

ಶಾಲೆ ಎಂದಾಕ್ಷಣ ಪ್ರಾಯೋಗಿಕ ಕಾರ್ಯಕ್ರಮಗಳು ಅದರಲ್ಲೂ ಕಲಿಕಾ ವಿಭಾಗಕ್ಕಾಗಿಯಿರುವದು ಸಾಮಾನ್ಯ. ಬನಹಟ್ಟಿಯ ಸಾಯಿ ಪ್ಲೇ ಹೋಂ ಹಾಗು ಭಕ್ತಿ ಪೂರ್ವ ಪ್ರಾಥಮಿಕ ಶಾಲೆಯ ಪುಟಾಣಿಗಳಿಗೆ ಅನೇಕ ಬಣ್ಣಗಳ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಬಣ್ಣದ ಬಟ್ಟೆಗಳನ್ನು ಮಾಸಿಕವಾಗಿ ಒಂದು ದಿನವನ್ನಾಗಿಸಿಕೊಂಡಿದ್ದಾರೆ.

ಸಂಸ್ಥೆ ಮುಖ್ಯಸ್ಥ ರಾಜು ಬಾಣಕಾರ ಮಾತನಾಡಿ, ಪುಟಾಣಿ ಮಕ್ಕಳಿಗೆ ಜ್ಞಾನಾರ್ಜನೆ ತುಂಬುವ ನಿಟ್ಟಿನೊಂದಿಗೆ ವಿಶೇಷ ಬಟ್ಟೆಗಳ ಸಂಕೇತದಿಂದ ಮಕ್ಕಳಲ್ಲಿಯೂ ಖುಷಿ ಮೂಡಿಸುವ ಸಂದೇಶವಾಗಿದೆ ಎಂದರು.

ಇದೇ ಸಂದರ್ಭ ತನುಶ್ರೀ ಯಾದವಾಡ, ಮಹಾನಂದ ಕೋಲಾರ, ಸುಭದ್ರಾ ಗೋಡ್ಯಾಳ, ವಾಣಿಶ್ರೀ ಬೆಳ್ಳಗಿ, ಮಂಜುಳಾ ಕನಗಾವಿ, ಅಂಜುಮ್ ಜಮಾದಾರ ಉಪಸ್ಥಿತರಿದ್ದರು.

## ದೇವಸ್ಥಾನದಲ್ಲಿ ಆರೋಗ್ಯ ಉಚಿತ ತಪಾಸಣೆ ಶಿಬಿರ ಮನೆ ಮದ್ದಿಗೆ ಹೆಚ್ಚಿನ ಆದ್ಯತೆ ನೀಡಿ-ಡಾ.ಲಿಂಗಾರೆಡ್ಡಿ



**ತೇರದಾಳ :** ಆಯುರ್ವೇದ ನಮ್ಮ ದೇಶದ ಪ್ರತಿಬಿಂಬವಾಗಿದೆ. ಆರೋಗ್ಯದಲ್ಲಿ ಏನಾದರು ಸಣ್ಣಪುಟ್ಟ ಕಾಯಿಲೆಗಳು ಕಂಡು ಬಂದರೆ ಮನೆ ಮದ್ದಿಗೆ ಮೊದಲು ಆದ್ಯತೆ ನೀಡಿ ಎಂದು ಇಲ್ಲಿನ ಜೆವಿ ಮಂಡಳ ಗ್ರಾಮೀಣ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ಪ್ರಾಚಾರ್ಯ ಡಾ. ಲಿಂಗಾರೆಡ್ಡಿ ಬಿರಾದಾರ ಹೇಳಿದರು.

ಅಲ್ಲಮಪ್ರಭುದೇವರ ದೇವಸ್ಥಾನದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಆರೋಗ್ಯ ಉಚಿತ ತಪಾಸಣೆ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.

ನಾವು ಸೇವಿಸುವ ಆಹಾರ ಮತ್ತು ಆಹಾರ ಪದ್ಧತಿ ಮೇಲೆ ನಮ್ಮ ಆರೋಗ್ಯ ಇರುತ್ತದೆ. ಆದ್ದರಿಂದ ಪೌಷ್ಠಿಕ ಆಹಾರ ಸೇವಿಸುವುದನ್ನು ಹೆಚ್ಚಾಗಿ ಮಾಡಬೇಕು.

ಇದರಿಂದ ಉತ್ತಮ ಆರೋಗ್ಯ ಹೊಂದಲು ಸಾಧ್ಯ ಎಂದು ಹೇಳಿದರು. ಮನೆಯ ಮದ್ದು ಕುರಿತು ಸಾರ್ವಜನಿಕರಿಗೆ ಇದೇ ಸಂದರ್ಭದಲ್ಲಿ ತಿಳಿಹೇಳಲಾಯಿತು. ಡಾ. ಶೀತಲ ಸದಲಗಿ, ಡಾ. ಆನಂದ ಕೆ., ಡಾ. ಸಂಪೂರ್ಣ ಕುಲ್ಲೂರ, ಡಾ. ಬಕೀಂ ಜಂಬಗಿ, ಡಾ. ಸೌಭಾಗ್ಯ ಮಠಪತಿ, ಡಾ. ಭಾರತಿ, ಕೇದಾರಿ ಪಾಟೀಲ ಹಾಗೂ ಮೆಡಿಕಲ್ ವಿದ್ಯಾರ್ಥಿಗಳು ಇದ್ದರು.

### ದ್ವಾದಶ ಪೀಠಾರೋಹಣ ನಿಮಿತ್ಯ ಗುರುಭವನ ಲೋಕಾರ್ಪಣೆ ಪೂರ್ವಭಾವಿ ಸಭೆ

## ಸದ್ಭಕ್ತರೇ ಶ್ರೀಮಠದ ನೈಜ ಆಸ್ತಿ: ಗುರುಸಿದ್ದೇಶ್ವರಶ್ರೀ

**ರಬಕವಿ-ಬನಹಟ್ಟಿ :** ರಬಕವಿ-ಬನಹಟ್ಟಿ, ತೇರದಾಳ,ಮಹಾಲಿಂಗಪೂರ ಸುತ್ತಲಿನ ಪ್ರದೇಶಗಳ ಸದ್ಭಕ್ತರ ಅಭಿಲಾಷೆಯಂತೆ ಗುರುದೇವ ಶ್ರೀಬ್ರಹ್ಮಾನಂದಶ್ರೀಗಳು ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಮತ್ತು ಕೃಷಿ ಪರಂಪರೆಯನ್ನು ನಡೆಸಿಕೊಂಡು ಬಂದಂತೆ ಇಂದಿಗೂ ಶ್ರೀಮಠ ಮುಂದುವರೆಸಿಕೊಂಡು ಬಂದಿದೆ. ಶ್ರೀಮಠದ ಬೆಳವಣಿಗೆಯಲ್ಲಿ ಪ್ರತಿಯೊಬ್ಬ ಭಕ್ತರೂ ಅಹರ್ನಿಶಿ ಶ್ರಮಿಸಿದ್ದು, ಸದ್ಭಕ್ತರೇ ಶ್ರೀಮಠದ ನೈಜ ಆಸ್ತಿಯಾಗಿದ್ದಾರೆಂದು ಗುರುಸಿದ್ದೇಶ್ವರಶ್ರೀಗಳು ನುಡಿದರು.



ಶನಿವಾರ ಸಂಜೆ ಶ್ರೀಮಠದ ಆವರಣದಲ್ಲಿ ಸಹಸ್ರಾರು ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಗುರುಸಿದ್ದೇಶ್ವರಶ್ರೀಗಳ ಪೀಠಾರೋಹಣದ ದ್ವಾದಶ ವರ್ಷಗಳು ಗತಿಸಿದ ಪ್ರಯುಕ್ತ ನೂತನ ಗುರುಭವನ ಲೋಕಾರ್ಪಣೆ ಕಾರ್ಯಕ್ರಮದ ಬಗ್ಗೆ ವಿವರಣೆ ನೀಡಿದ ಬಳಿಕ ಆಶೀರ್ವಚನ ನೀಡಿದ ಶ್ರೀಗಳು ರಾಜ್ಯದಲ್ಲಿ ಇಂದು ಮಠಗಳು ಸಾಂಪ್ರದಾಯಿಕ ಆಚರಣೆಗಳ ನಿರ್ವಹಣೆಯಿಲ್ಲದೇ ಮತ್ತು ಆರ್ಥಿಕ ಕ್ಷಮತೆ ಕೊರತೆಯ ಕಾರಣಕ್ಕೆ ಕ್ಷೀಣಿಸುತ್ತಿವೆ. ಆದರೆ ನಿರಾಭಾರಿ ಶ್ರೀಗುರುದೇವ ಬ್ರಹ್ಮಾನಂದರ ತಪೋಬಲ ಮತ್ತು ಶ್ರೀಸಿದ್ದೇಶ್ವರ ಗುರುವರೇಣ್ಯರ ಕಾಯಕಶ್ರದ್ಧೆಯ ಕಾರಣ ಆಶ್ರಮದ ಸರ್ವಾಂಗೀಣ ಪ್ರಗತಿ ನಡೆಯುತ್ತಿದೆ. ವಿಜಯಪುರದ ಜ್ಞಾನಯೋಗಾಶ್ರಮದ ಶ್ರೀಸಿದ್ದೇಶ್ವರ ಮಹಾಸ್ವಾಮಿಗಳ ಆಶಯದಂತೆ, ಭಕ್ತರೆಲ್ಲರ ಒಕ್ಕೊರಲಿನ ನಿರ್ಧಾರದಂತೆ 2021ರ ಡಿಸೆಂಬರ್ 29ರಂದು ನಡೆದ ಪೀಠಾರೋಹಣ ಕಾರ್ಯಕ್ರಮ ಸಂದು 12ವರ್ಷಗಳೇ ಗತಿಸಿವೆ. ಈ ಅವಧಿಯಲ್ಲಿ ಭಕ್ತರ ಮತ್ತು ದಾನಿಗಳ ನೆರವಿನಿಂದ ಶ್ರೀಮಠ ಅಭಿವೃದ್ಧಿಯತ್ತ ದಾಪುಗಾಲಿಟ್ಟಿದೆ. ಗುರು ದೊಡ್ಡವರಲ್ಲ, ಬದಲಾಗಿ ಭಕ್ತರೇ ದೊಡ್ಡವರು ಏಕೆಂದರೆ ಭಕ್ತರು ಗುರುವನ್ನು ಜಗದ್ಗುರುವಾಗಿಸುತ್ತಾರೆ. ಈ ಶಕ್ತಿ ಇರುವ ಸದ್ಭಕ್ತರೇ ಶ್ರೀಮಠದ ಆಸ್ತಿಯಾಗಿದ್ದಾರೆ. ಅನುಭಾವದಂಗಳ, ಲಿಂಗದೀಕ್ಷೆ, 10 ಸಾವಿರಕ್ಕೂ ಹೆಚ್ಚಿ ದೀಕ್ಷಾಧಾರಿಗಳು, 25 ಶಾಲೆಗಳಲ್ಲಿ ಬೆಳರವ ಸಿರಿ, ಸುತ್ತಲಿನ 6 ನಗರ, ಪಟ್ಟಣಗಳಲ್ಲಿ ವ್ಯಸನಮುಕ್ತ ಪಾದಯಾತ್ರೆಗಳು, ಶ್ರಾವಣಮಾಸದ ಮತ್ತು ಸಂಕ್ರಮಣದ ಪ್ರವಚನ, ವಿಶೇಷ ಕಾರ್ಯಕ್ರಮಗಳು, ಗುರುಭವನ ಕಟ್ಟಡ ನಿರ್ಮಾಣ ಇವೆಲ್ಲವೂ ಭಕ್ತರ ಸಹಕಾರದಿಂದಲೇ ಪೂರ್ಣಗೊಂಡಿವೆ. ದ್ವಾದಶ ಪೀಠಾರೋಹಣ ಮತ್ತು ಗುರುಭವನ ಲೋಕಾರ್ಪಣೆ ಕಾರ್ಯಕ್ರಮಗಳು ಡಿ.19ರಿಂದ ಆರಂಭಗೊಂಡು ಜನೇವರಿ 14ರ ವರೆಗೆ ನಿರಂತರ ಸಾಗಲಿದ್ದು ಎಲ್ಲರ ಸಹಕಾರ ಅಗತ್ಯವೆಂದರು.

ಸ್ವಾಗತ ಮತ್ತು ಪ್ರಾಸ್ತಾವಿಕ ಮಾತುಗಳಾಡಿದ ಗಿರೀಶ ಮುತ್ತೂರ ಲೋಕಾರ್ಪಣೆ ಕಾರ್ಯಕ್ರಮದ ವಿವರಗಳನ್ನು ಸಭೆಯ ಮುಂದಿಟ್ಟರು. ಶಿವಾನಂದ ಬಾಗಲಕೋಟಮಠ, ಧರೆಪ್ಪ ಉಳ್ಳಾಗಡ್ಡಿ,ಸಿದ್ಧರಾಜ ಪೂಜಾರಿ ಮತ್ತು ಸದಾಶಿವ ಗಾಯಕವಾಡ ದ್ವಾದಶ ಪೀಠಾವರೋಹಣ ನಿಮಿತ್ಯ ಗುರುಸಿದ್ದೇಶ್ವರಶ್ರೀಗಳನ್ನು ಷಟಸ್ಥಳ ಸಿಂಹಾಸನದಲ್ಲಿ ಕೂರಿಸಿ ಭಕ್ತವೃಂದ ಗೌರವಿಸುವ ಕೆಲಸದೊಡನೆ ಶ್ರೀಮಲ್ಲಿಕಾರ್ಜುನ ಸಮಸ್ತ ದೈವ ಮಂಡಳದ ವತಿಯಿಂದ 17 ದಿನಗಳ ಕಾಲ ಎಲ್ಲ ವಿಧದ ನೆರವು ನೀಡುವುದಾಗಿ ಘೋಷಿಸಿದರು. ಗುರುದೇವ ಬ್ರಹ್ಮಾನಂದಶ್ರೀಗಳ ರಜತ ವಿಗ್ರಹ, ಶ್ರೀಮಠದ ಎಲ್ಲ 34 ಕಲಶಗಳನ್ನು ರಾಮಪೂರದ ಶ್ರೀನೀಲಕಂಠೇಶ್ವರ ಮಠದಿಂದ ಸಕಲ ಮಂಗಲವಾದ್ಯಗಳೊಡನೆ ಆರುತಿ, ಕುಂಭಮೇಳ ಜೊತೆ ಪಾದಯಾತ್ರೆ ಮೂಲಕ ಮೆರವಣಿಗೆಯಲ್ಲಿ ಶ್ರೀಮಠಕ್ಕೆ ತರಲಾಗುವುದು. ಪ್ರತಿದಿನ ಪ್ರವಚನ, ಶಾಸ್ತ್ರೀಯ ಸಂಗೀತ, ಜನಪದ ಸಂಗೀತ ಮತ್ತು ರಬಕವಿಯ ಎಲ್ಲ ಶಿಕ್ಷಣ ಸಂಸ್ಥೆಗಳ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ರಬಕವಿ-ಬನಹಟ್ಟಿ, ರಾಮಪೂರ, ಹೊಸೂರ, ತೇರದಾಳ, ಕಾಲತಿಪ್ಪಿ, ಚಿಮ್ಮಡ, ಮಹಾಲಿಂಗಪೂರ, ಯರಗಟ್ಟಿ, ಗೋಲಭಾಂವಿ ಸೇರಿದಂತೆ ಸುತ್ತಲಿನ ಭಕ್ತರು ಎಲ್ಲ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆಂದು ನಿರೂಪಕ ಮಹಾದೇವ ಕವಿಶೆಟ್ಟಿ ವಿವರಿಸಿದರು. ಪೂರ್ವಭಾವಿ ಸಭೆಯಲ್ಲಿ ರಬಕವಿ ಸುತ್ತಲಿನ ಗ್ರಾಮಗಳ ಸಾವಿರಾರು ಭಕ್ತರು ಪಾಲ್ಗೊಂಡಿದ್ದರು.

## ಪ್ರಭುದೇವರ ನೂತನ ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮ ಹಳ್ಳಿಗಳಲ್ಲಿ ಯಶಸ್ವಿಯಾದ ಪ್ರಭು ಪರಮಜ್ಯೋತಿ ಯಾತ್ರೆ

**ತೇರದಾಳ :** ಕ್ಷೇತ್ರಾಧಿಪತಿ ಅಲ್ಲಮಪ್ರಭುದೇವರ ನೂತನ ದೇವಸ್ಥಾನ ಲೋಕಾರ್ಪಣೆ ನಿಮಿತ್ತ ಡಾ. ಮಹಾಂತಪ್ರಭು ಶ್ರೀ, ಪ್ರಭು ಶ್ರೀ ಹಾಗೂ ಗಂಗಾಧರ ದೇವರು ಪ್ರಭು ಪರಮಜ್ಯೋತಿಯೊಂದಿಗೆ ಕೈಗೊಂಡಿರುವ ಸದ್ಗುಣಗಳ ಧಿಕ್ಷೆ ದುಶ್ಚಟಗಳ ಭಿಕ್ಷೆ ಯಾತ್ರೆ ಸುತ್ತಮುತ್ತ ಹಳ್ಳಿಗಳಲ್ಲಿಯೂ ಯಶ್ವಿಯಾಗಿ ನಡೆಯುತ್ತಿದೆ.



ಗೋಲಭಾವಿ, ಕಾಲತಿಪ್ಪಿ ಸಸಾಲಟ್ಟಿ ಗ್ರಾಮಗಳ ತೋಟದ ವಸತಿ ಹಾಗೂ ಗ್ರಾಮಗಳಲ್ಲಿ ನಡೆದ ಯಾತ್ರೆಯಲ್ಲಿ ಸಾವಿರಾರು ಭಕ್ತರು ಪಾಲ್ಗೊಳ್ಳುವ ಮೂಲಕ ಯಾತ್ರೆ ಕೈಗೊಂಡಿರುವ ಶ್ರೀಗಳಿಗೆ ಮತ್ತಷ್ಟು ಹುಮ್ಮಸ್ಸು ತುಂಬುವ ಕೆಲಸ ಮಾಡುತ್ತಿದ್ದಾರೆ. ಹೋದ ಕಡೆಗೆಲ್ಲ ಅದ್ಧೂರಿ ಸ್ವಾಗತ, ಪಾದಪೂಜೆ, ಹೂ ಮಳೆ, ಆರತಿ, ಜೈಕಾರ ಎಲ್ಲವೂ ರೋಮಾಂಚನಗೊಳಿಸುತ್ತಿದೆ.

ವಾದ್ಯಮೇಳಗಳು ಕೂಡ ಸಂಭ್ರಮಿಸುತ್ತಿವೆ. ಪ್ರಸಾದಕ್ಕೂ ಸೈ-ಗೋಲಭಾವಿ ಗ್ರಾಮದ ಭಕ್ತರು ಅನ್ನಪ್ರಸಾದಕ್ಕೆ ಜಿಲೇಬಿ ವ್ಯವಸ್ಥೆ ಮಾಡುವುದಾಗಿ ಒಪ್ಪಿಕೊಂಡಿದ್ದರೆ ಕಾಲತಿಪ್ಪಿ ಗ್ರಾಮದವರು ಶುಕ್ರವಾರ ಸಜ್ಜಕದ ಹೋಳಿಗೆ ಮಾಡಿಕೊಂಡು ಬಂದು ಭಕ್ತರಿಗೆ ಬಡಿಸಿ ಹೋಗಿದ್ದಾರೆ. ಇನ್ನೂ ಸಸಾಲಟ್ಟಿ ಭಕ್ತರು ಕರೆದ ಕಡಬು ಮಾಡಿಸುವುದಾಗಿ ಹೇಳಿದ್ದಾರೆ. ತೇರದಾಳಲ್ಲಿಯೂ ಶೇಂಗಾ ಹೋಳಿಗೆ ಜಾತ್ರೆ ನಡೆಯಲಿದ್ದು, ಬೆಳಗಾವಿ ಜಿಲ್ಲೆ ಶೇಗುಣಸಿ ಗ್ರಾಮದ ಭಕ್ತರು ಕೂಡ ಶೇಂಗಾ ಹೋಳಿಗೆ ಮಾಡಿಕೊಂಡು ಬರುವುದಾಗಿ ತಿಳಿಸಿದ್ದಾರೆ. ಪ್ರತಿದಿನ ಸರಾಸರಿ 5 ಸಾವಿರ ಭಕ್ತರು ಅನ್ನಪ್ರಸಾದಕ್ಕೆ ಸಾಕ್ಷಿಯಾಗುತ್ತಿರುವುದು ಇತಿಹಾಸವೇ ಸರಿ.

# ಸರ್ಜಿಫೆಸ್ಟ್ ಸಮ್ಮೇಳನಗಳು ಪರೀಕ್ಷೆ ತಯಾರಿಯಲ್ಲಿ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸಹಾಯಕಾರಿ: ಡಾ. ಅರುಣ ಇನಾಮದಾರ

**ವಿಜಯಪುರ :** ಸರ್ಜಿಫೆಸ್ಟ್ ಸಮ್ಮೇಳನಗಳು ಪರೀಕ್ಷೆ ತಯಾರಿಯಲ್ಲಿ ಇರುವ ವೈದ್ಯಕೀಯ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುತ್ತವೆ ಎಂದು ಬಿ.ಎಲ್.ಡಿ.ಇ. ಡೀಮ್ಡ್ ವಿಶ್ವವಿದ್ಯಾಲಯ ಸಮಕುಲಪತಿ ಡಾ. ಅರುಣ ಇನಾಮದಾರ ಹೇಳಿದರು.

ಬಿಎಲ್‌ಡಿಇ ಡೀಮ್ಡ್ ವಿವಿ ಶ್ರೀ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಶಸ್ತ್ರಚಿಕಿತ್ಸಾ ವಿಭಾಗ ಮತ್ತು ವಿಜಯಪುರ ಜಿಲ್ಲಾ ಶಸ್ತ್ರಚಿಕಿತ್ಸಕರ ಸಂಘದ ಸಹಯೋಗದಲ್ಲಿ ಅ.18ರಂದು ನಡೆದ ಸ್ನಾತಕೋತ್ತರ ಪದವಿ ಪ್ರಾಯೋಗಿಕ ಪರೀಕ್ಷೆ ಆಧಾರಿತ ಮುಂದುವರೆದ ವೈದ್ಯಕೀಯ ಶಿಕ್ಷಣ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಇಂಥ ಸಮ್ಮೇಳನಗಳಲ್ಲಿ ಅನುಭವಿ ಮತ್ತು ನುರಿತ ಪ್ರಾಧ್ಯಾಪಕರು ಭಾಗವಹಿಸುವುದರಿಂದ ಪರೀಕ್ಷೆ ಎದುರಿಸುವ ವಿದ್ಯಾರ್ಥಿಗಳಿಗೆ ಸಂದೇಹಗಳನ್ನು ನಿವಾರಿಸಿಕೊಳ್ಳಲು ಅನುಕೂಲವಾಗುತ್ತವೆ. ಇತ್ತೀಚಿನ ದಿನಗಳಲ್ಲಿ ನಮ್ಮ ಮಹಾವಿದ್ಯಾಲಯದಲ್ಲಿ ವಿಶಿಷ್ಟ ಮತ್ತು ನವೀನ ಪ್ರಾಯೋಗಿಕ ಸಮ್ಮೇಳನ ಹಾಗೂ ಕಾರ್ಯಕ್ರಮಗಳು ನಡೆಯುತ್ತಿರುವುದು ಸಂತಸ ತಂದಿದೆ ಎಂದರು.



ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ ಕರ್ನಾಟಕ ರಾಜ್ಯದ ಖ್ಯಾತ ವೈದ್ಯಕೀಯ ಲೇಖಕ ಹಾಗೂ ಮಣಿಪಾಲದ ಕಸ್ತೂರಬಾ ಮೆಡಿಕಲ್ ಕಾಲೇಜಿನ ಸಹಾಯಕ ಡೀನ್ ಡಾ. ರಾಜಗೋಪಾಲಶೆಣೈ ಅವರು ವಿದ್ಯಾರ್ಥಿಗಳಿಗೆ ಸರ್ಜಿಫೆಸ್ಟ್ ಕಾರ್ಯಕ್ರಮದ ಮಹತ್ವವನ್ನು ವಿವರಿಸಿದರು. ಅಲ್ಲದೇ, ಬಿ.ಎಲ್.ಡಿ.ಇ ಆಸ್ಪತ್ರೆಗೆ ತಾವು ನೀಡುತ್ತಿರುವ 4ನೇ ಭೇಟಿ ಇದಾಗಿದ್ದು, ಇಲ್ಲಿಯ ಅಭಿವೃದ್ಧಿ ಕಾರ್ಯಗಳು ಪ್ರಶಂಸಾರ್ಹವಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಮತ್ತು ಸಂಘಟನಾ ಅಧ್ಯಕ್ಷ ಡಾ. ಮಂಜುನಾಥ ಕೋಟೆಣ್ಣವರ ಮಾತನಾಡಿ, ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಅಣಕು ಪರೀಕ್ಷೆಯನ್ನು ಪ್ರಥಮ ಬಾರಿಗೆ ಆಯೋಜಿಸಿದ್ದು, ಇದಕ್ಕೆ ಎಲ್ಲರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಸರ್ಜಿಫೆಸ್ಟ್ ಮುಖ್ಯ ಪ್ರಾಯೋಗಿಕ ಪರೀಕ್ಷೆಯ ಎಲ್ಲ ಬಗೆಯ ವಿಭಾಗಗಳನ್ನು ಒಳಗೊಂಡಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆಯಬೇಕು ಎಂದು ಕಿವಿ ಮಾತು ಹೇಳಿದರು.

ಈ ಸಮ್ಮೇಳನದಲ್ಲಿ ರಾಜ್ಯದ ಶಸ್ತ್ರಚಿಕಿತ್ಸಾ ವೈದ್ಯಕೀಯ ಸ್ನಾತಕೋತ್ತರ ವಿದ್ಯಾರ್ಥಿಗಳು ಸೇರಿದಂತೆ ಪ್ರಾಧ್ಯಾಪಕರು ಭಾಗವಹಿಸಿದ್ದರು. ಹುಬ್ಬಳ್ಳಿ ಕೆ.ಎಂ.ಸಿ. ಪ್ರಾಚಾರ್ಯ ಡಾ. ಗುರುಶಾಂತಪ್ಪ ಯಲಗಚ್ಚಿನ, ಬಿ.ಎಲ್.ಡಿ.ಇ ಡೀಮ್ಡ್ ವಿವಿ ವೈದ್ಯಕೀಯ ಕಾಲೇಜಿನ ಪ್ರಾಚಾರ್ಯ ಡಾ. ಅರವಿಂದ ಪಾಟೀಲ, ವಿಜಯಪುರ ಜಿಲ್ಲಾ ಶಸ್ತ್ರ ಚಿಕಿತ್ಸಕರ ಸಂಘದ ಕಾರ್ಯದರ್ಶಿ ಡಾ. ರಮಾಕಾಂತ ಬಳ್ಳೂರಕರ, ಸಂಘಟನಾ ಕಾರ್ಯದರ್ಶಿ ಡಾ. ದಯಾನಂದ ಬಿರಾದಾರ, ಬೆಳಗಾವಿ ಜೆ.ಎನ್.ಎಂ.ಸಿ ಡಾ. ಶ್ರೀಶೈಲ ಮೆಟಗುಡ್ಡ, ಗದುಗಿನ ಜಿಮ್ಸ ಡಾ. ಜ್ಯೋತಿ ಕರೆಗೌಡರ, ಬಾಗಲಕೋಟೆ ಎಸ್‌ಎನ್‌ಎಂಸಿ ಡಾ. ಈಶ್ವರ ಕಲಬುರ್ಗಿ, ಸೋಲಾಪುರದ ಅಶ್ವಿನಿ ಮೆಡಿಕಲ್ ಕಾಲೇಜು ಡಾ. ಲಕ್ಷ್ಮಣ ಅಹಿರಸಂಗ, ಹುಬ್ಬಳ್ಳಿಯ ಖ್ಯಾತ ಸರ್ಜನ್ ಡಾ. ಚೇತನ ಹೊಸಕಟ್ಟಿ, ಬಿ.ಎಲ್.ಡಿ.ಇ. ಡೀಮ್ಡ್ ವಿವಿ ಡೀನ್ ಫ್ಯಾಕಲ್ಟಿ ಆಫ್ ಮೆಡಿಸಿನ್ ಡಾ. ತೇಜಸ್ವಿನಿ ವಲ್ಲಭ, ಡಾ. ವಿಜಯಾ ಪಾಟೀಲ, ಡಾ. ಶೃತಿ ಶೀಳಿನ, ಉಪ ಪ್ರಾಚಾರ್ಯ ಡಾ. ಎಂ.ಬಿ. ಪಾಟೀಲ, ಪ್ರಾಧ್ಯಾಪಕರಾದ ಡಾ. ರವಿಕುಮಾರ ಚೌಧರಿ, ಡಾ. ಪ್ರಸಾದ ಸಾಸನೂರ, ಡಾ. ಗಿರೀಶ ಕುಲ್ಲೊಳ್ಳಿ, ಡಾ. ನಿಶಿಕಾಂತ ಗುಜರ, ಡಾ. ಸುಶೀಲಾ ಗರಗ, ಡಾ. ಆನಂದ ಝುಳಕಿ, ಡಾ. ರಾಜಕುಮಾರ ಹಿರೇಮಠ, ಡಾ. ಸಂಜೀವ ರಾಠೋಡ, ಡಾ. ಶೃತಿ ಶೀಳಿನ, ಡಾ. ವೀಣಾ, ಡಾ. ಮಂಜುನಾಥ ಸಾವಂತ, ಡಾ. ನಾಗರಾಜ ಮುಂತಾದವರು ಉಪಸ್ಥಿತರಿದ್ದರು.

# ಡೋಣಿ ನದಿ ಹೂಳೆತ್ತಲು ಕಾಮಗಾರಿ ಮಂಜೂರಾತಿಗೆ ರೈತರ ಮನವಿ



**ವಿಜಯಪುರ :** ತಾಲೂಕಿನ ಡೋಣಿ ನದಿ ಹೂಳೆತ್ತುವ ಕಾಮಗಾರಿಗೆ ಮಂಜೂರಾತಿ ಹಾಗೂ ಮಳೆಯಿಂದ ಬೆಳೆ ಹಾನಿಗೆ ಪರಿಹಾರ ನೀಡಲು ಒತ್ತಾಯಿಸಿ ರೈತರು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಂಸದ ರಮೇಶ ಜಿಗಜಿಣಗಿ ಅವರು ಮಾತನಾಡಿ, ಜಿಲ್ಲೆಯ ತೋಟಗಾರಿಕೆ ಬೆಳೆಗಳಾದ ದ್ರಾಕ್ಷಿ, ದಾಳಿಂಬೆ, ನಿಂಬೆ, ಬಾಳೆ, ಹಾಗೂ ಕೃಷಿ ಬೆಳೆಗಳಾದ ತೊಗರಿ, ಕಡಲೆ, ಗೋವಿನ ಜೋಳ ಮುಂತಾದ ಬೆಳೆಗಳು ಮಳೆಯಿಂದ ಅಪಾರ ಪ್ರಮಾಣದಲ್ಲಿ ಹಾನಿಗೊಳಗಾಗಿದ್ದು, ಅವುಗಳಿಗೆ ಸೂಕ್ತ ಬೆಳೆ ಪರಿಹಾರ ಒದಗಿಸಬೇಕು. ಡೋಣಿ ಹೂಳೆತ್ತಲು ರಾಜ್ಯ ಸರಕಾರದ ವಿಜಯಪುರ ಜಿಲ್ಲೆಯ ಇಬ್ಬರು ಸಚಿವರು ರಾಜ್ಯ ಸರಕಾರದಿಂದ ಡೋಣಿ ಹೂಳೆತ್ತಲು ತಮ್ಮ ಪಾಲಿನ ಅನುದಾನ ನೀಡಿದರೆ ಕೇಂದ್ರ ಸರಕಾರದಿಂದ ಬರುವ ಅನುದಾನ ಬಿಡುಗಡೆ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡಿ ಈ ಭಾಗದ ರೈತರ ಭೂಮಿಗೆ ಅನುಕೂಲ ಮಾಡಿಕೊಡುತ್ತೇನೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿ.ಪಂ. ಮಾಜಿ ಅಧ್ಯಕ್ಷ ಹಾಗೂ ಬಿಜೆಪಿ ಮುಖಂಡರಾದ ಉಮೇಶ ಕೋಳಕೂರ, ರಾಜ್ಯ ರೈತ ಕಾರ್ಯಕಾರಿಣಿ ಸದಸ್ಯ ಸಂಜಯಗೌಡ ಪಾಟೀಲ, ಬಿಜೆಪಿ ರಾಜ್ಯ ಓಬಿಸಿ ಉಪಾಧ್ಯಕ್ಷ ವಿವೇಕಾನಂದ ಡಬ್ಬಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಈರಣ್ಣ ರಾವೂರ, ಜಿ.ಪಂ. ಮಾಜಿ ಸದಸ್ಯ ಮಲ್ಲು ಕನ್ನೂರ, ಬಿಜೆಪಿ ಮಂಡಲ ಪ್ರಧಾನ ಕಾರ್ಯದರ್ಶಿ ಈರಣ್ಣ ಶಿರಮಗೊಂಡ, ಗುರಣ್ಣ ಜಂಗಮಶೆಟ್ಟಿ, ಗುರಣ್ಣ ಬೂದಿಹಾಳ, ಕಲ್ಮೇಶ ಹಿರೇಮಠ, ರಮೇಶ ಜುಮನಾಳ, ಆನಂದ ಸೋಮಕ್ಕನವರ, ಸಿದ್ದುಗೌಡ ಬಿರಾದಾರ, ವಿಠ್ಠಲ ರಾಮತೀರ್ಥ, ಎಂ.ಟಿ. ಪಾಟೀಲ, ಶ್ರೀಶೈಲ ಕೊಟ್ಯಾಳ, ಸಂಗಪ್ಪ ಕೊಟ್ಯಾಳ ಹಾಗೂ ಇನ್ನಿತರ ಮತಕ್ಷೇತ್ರದ ವಿವಿಧ ಗ್ರಾಮಸ್ಥರು ಉಪಸ್ಥಿತರಿದ್ದರು.

# ಫಿಶ್ ಟನಲ್ ಎಕ್ಸ್ಪೋದಲ್ಲಿ ರೇಂಜರ್ ಸ್ವಿಂಗ್‌ನಿಂದ ಕೆಳಗೆ ಬಿದ್ದು ಯುವತಿ ಸಾವು

**ವಿಜಯಪುರ :** ನಗರದ ನವಭಾಗ ರಸ್ತೆಯಲ್ಲಿ ಇರುವ ಫಿಶ್ ಟನಲ್ ಎಕ್ಸ್ಪೋದಲ್ಲಿರೇಂಜರ್ ಸ್ವಿಂಗ್ ನಿಂದ ಕೆಳಗೆ ಬಿದ್ದು ಯುವತಿಯೊಬ್ಬಳು ಸಾವನಪ್ಪಿದ ದಾರುಣ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಬಸವನ ಬಾಗೇವಾಡಿ ತಾಲೂಕಿನ ಇಂಗಳೇಶ್ವರ ಗ್ರಾಮದ ನಿಖಿತಾ ಅರವಿಂದ ಬಿರಾದಾರ (20) ಮೃತಪಟ್ಟ ಯುವತಿ. ಕಳೆದ ಅಕ್ಟೋಬರ್ 20 ರ ಸಾಯಂಕಾಲ ಈ ಘಟನೆ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ.

ಘಟನೆಯ ವಿಡಿಯೋ ಪೊ?ಷಕರ ಮೊಬೈಲ್ ನಲ್ಲಿ ಸೆರೆಯಾಗಿದೆ.

ತಲೆ ಕೆಳಗಾಗಿ ತೂಗಾಡಿಸುವ ರೇಂಜರ್ ಸ್ವಿಂಗ್ ನಲ್ಲಿ ಮೂವರು ಯುವತಿಯರು ಕುಳಿತಿದ್ದರು. ಕಳಪೆ ಸೇಫ್ಟಿ ಬೆಲ್ಟ್ ಹಾಕಿದ್ದ ಕಾರಣ ತೂಗಾಟಾದ ಸಮಯದಲ್ಲೇ ಬೆಲ್ಟ್ ಸಡಿಲಾಗಿ ಯುವತಿ ಕೆಳಗೆ ಬಿದ್ದಿದ್ದಾಳೆ.

ಘಟನೆಯ ನಂತರ ಯುವತಿಯ ತಲೆ, ಕಾಲುಗಳಿಗೆ ತೀವ್ರವಾಗಿ ಪೆಟ್ಟಾಗಿತ್ತು. ಆಕೆಯನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ಚಿಕಿತ್ಸೆ ಫಲಿಸದೆ ಯುವತಿ ಅಸುನೀಗಿದ್ದಾಳೆ.

ಪೊಷಕರು ಹಾಗೂ ಗೆಳೆತಿಯರೊಂದಿಗೆ ಫಿಶ್ ಟನಲ್ ಎಕ್ಸ್ಪೋಕ್ಕೆ ಯುವತಿ ಹೋಗಿದ್ದಳು. ಯುವತಿ

ಇತರೆ ಇಬ್ಬರು ಗೆಳತಿಯರೊಂದಿಗೆ ರೇಂಜರ್ ಸ್ವಿಂಗ್ ನಲ್ಲಿ ಕುಳಿತಿದ್ದಳು.

ರೇಂಜರ್ ಸ್ವಿಂಗ್ ಬೆಲ್ಟ್ ಸರಿ ಇದೆಯೋ ಇಲ್ಲವೋ ಎಂದು ಆಪರೇಟರ್ ಗೆ ಯುವತಿ ತಾಯಿ ಕೇಳಿದ್ದಳು.

ಎಲ್ಲವೂ ಸರಿಯಾಗಿದೆ ಎಂದು ಆಪರೇಟರ್ ಹೇಳಿದ್ದನು. ಆದಾಗ್ಯೂ ತಲೆ ಕೆಳಗೆ ಮೇಲೆ ಮಾಡಿ ತೂಗುತ್ತಿರುವಾಗಲೇ ಭಯದಿಂದ ಯುವತಿಯರು ಚೀರುತ್ತಿದ್ದರು.

ಆಗ ರೇಂಜರ್ ಸ್ವಿಂಗ್ ಯಂತ್ರ ನಿಲ್ಲಿಸುವಂತೆ ಆಪರೇಟರ್ ಬಳಿ ಪದೇ ಪದೇ ನಿಖಿತಾಳ ತಾಯಿ ಗೀತಾ ಮನವಿ ಮಾಡಿದರು. ಯುವತಿ ತಾಯಿ ಗೀತಾ ಮನವಿಗೆ ಸ್ಪಂದಿಸದೇ ರೇಂಜರ್ ಸ್ವಿಂಗ್ ನಿಲ್ಲಿಸದೇ ಆಪರೇಟರ್ ಉದಾಸೀನ ಮಾಡಿದ ಎಂದು ಪೊ?ಷಕರು ಆರೋಪಿಸಿದ್ದಾರೆ. ಯುವತಿ ನಿಖಿತಾ ಕೆಳಗೆ ಬಿದ್ದ ಬಳಿಕವೂ ಆಯೋಜಕರು ಪ್ರಾಥಮಿಕ ಚಿಕಿತ್ಸೆ ಹಾಗೂ ಅಂಬ್ಯುಲೆನ್ಸ್ ವ್ಯವಸ್ಥೆ ಮಾಡದೆ ನಿರ್ಲಕ್ಷ್ಯ ತೋರಿದರು ಎಂದೂ ಪೊಷಕರು ದೂರಿದ್ದಾರೆ.

ಅಟೋದಲ್ಲಿ ನಗರದ ಖಾಸಗಿ ಆಸ್ಪತ್ರೆಗೆ ನಿಖಿತಾಳನ್ನು ಪೊ?ಷಕರು ಸಾಗಿಸಿದ್ದರು.ಗಾಂಧಿಚೌಕ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇಂಡಿ: ಮಕ್ಕಳಿಗೆ ಉತ್ತಮ ಸಂಸ್ಕಾರ ಅಗತ್ಯ

**ಇಂಡಿ :** ಮಕ್ಕಳು ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಸಂಸ್ಕೃತಿ ಹಾಗೂ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಮಹಾರಾಷ್ಟ್ರದ ಸೋನಾರಿಯ ಕಾಳಭೈರವ ಮಠದ ಸಂಜಯ ಮಹಾರಾಜ ಹೇಳಿದರು.

ಪಟ್ಟಣದ ಅಂಬಾಭವಾನಿ ದೇವಸ್ಥಾನ ಸಮಿತಿ ಮತ್ತು ಭಾವಸಾರ ಸಮಾಜ ವತಿಯಿಂದ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಎಂಜಿಯರಿಂಗ್ ಮಹಾವಿದ್ಯಾಲಯದ ಪ್ರಾಚಾರ್ಯ ಶ್ರೀಧರ ಕೋಳೆಕರ ಮಾತನಾಡಿ ಇಂದಿನ ಮಕ್ಕಳು ಬಾಲ್ಯದಿಂದಲೇ ಅತ್ಯಂತ ಪ್ರತಿಭಾವಂತರಾಗಿದ್ದು ಅವರಲ್ಲಿ ಆತ್ಮಸ್ಥೈರ್ಯ ಹಾಗೂ ವಿಶ್ವಾಸ ಮೂಡಿಸುವ ಮೂಲಕ ಸಮಾಜದಲ್ಲಿ ಉತ್ತಮ ನಾಗರಿಕರನ್ನಾಗಿ ರೂಪಿಸುವ ಜವಾಬ್ದಾರಿ ಪೊ?ಷಕರು ಹಾಗೂ ಶಿಕ್ಷಕರ ಮೇಲಿದೆ ಎಂದರು.

ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ವೈಷ್ಣವಿ ಪತಂಗೆ, ತೇಜಸ್ವಿನಿ ಝಿಂಗಾಡೆ, ಅಭಿಷೇಕ ಝಿಂಗಾಡೆ, ಸಂಧ್ಯಾ ಮಹೀಂದ್ರಕರ, ರುತಿಕಾ ಸುಲಾಖೆ, ಕೃಷ್ಣಾ ಸುಲಾಖೆ ಮತ್ತಿತರನ್ನು ಸನ್ಮಾನಿಸಲಾಯಿತು. ಶಾಲಾ ಮಕ್ಕಳಿಗೆ ಸಮಾಜದ ವತಿಯಿಂದ ನೋಟಬುಕ್ ಮತ್ತು ಪೆನ್ನು ವಿತರಿಸಲಾಯಿತು.

ಮೋತಿಲಾಲ ಕೋಳೆಕರ, ಶಿವಾಜಿ ಕೋಳೆಕರ, ಗಣು ಮಹೀಂದ್ರಕರ, ಕಿರಣ ಬಳಮಕರ, ಸುಭಾಷ ಬಳಮಕರ, ಭಗವಂತ ಕರಣೆ, ಡಾ.ರಾಜೇಶ ಕೋಳೆಕರ ಇದ್ದರು.

# ವಿರಕ್ತಮಠದ ಆಸ್ತಿ ವಿಚಾರ ಕೋರ್ಟ್‌ನಲ್ಲಿದೆ ಎಂದ ಶಾಸಕ ಮನಗೂಳಿ

**ಸಿಂದಗಿ :** ಪಟ್ಟಣದಲ್ಲಿರುವ ವಿರಕ್ತಮಠದ ಆಸ್ತಿ ವಕ್ಫ್ ಆಸ್ತಿ ಎಂದು 11ನೇ ಕಲಂನಲ್ಲಿ ಸೇರಿದೆ. ಅದು ತಪ್ಪಾಗಿ ಸೇರಿದೆ ಅದನ್ನು ತೆಗೆದು ಹಾಕಲಾಗುವುದು ಎಂದು ಉಸ್ತುವಾರಿ ಸಚಿವರಾದ ಎಂ.ಬಿ ಪಾಟೀಲರು ಹೇಳಿದ್ದಾರೆ. ಆದರೆ, 10–01–2019ರಲ್ಲಿ ಇದು ವಕ್ಫ್ ಆಸ್ತಿ ಎಂದು 11ನೇ ಕಲಂನಲ್ಲಿ ಸೇರಿದೆ. ಅಲ್ಲಿಂದ ಇಲ್ಲಿಯ ತನಕ ಮಠದ ಸ್ವಾಮೀಜಿ ತಹಶೀಲ್ದಾರರಿಗೆ ಒಂದು ಅರ್ಜಿ ಕೊಟ್ಟಿಲ್ಲ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಬುಧವಾರ ಮಾಧ್ಯಮಗೋಷ್ಠಿ ಮಾತನಾಡಿದ ಅವರು, 5 ಎಕರೆ 19 ಗುಂಟೆ ಎಂದು ದಾಖಲಾಗಿದೆ. ಈ ಬಗ್ಗೆನೂ ಕೇಳಿಲ್ಲ. ಬಿಜೆಪಿ ನಿಯೋಗ ಬಂದಾಗ ಇದನ್ನು ಪ್ರಸ್ತಾಪ ಮಾಡ್ತಾರೆ ಅಂದರೆ ಉದೇಶ ಬೇರೆ ಇದೆ. ವಿರಕ್ತಮಠ ಆಸ್ತಿ ವಿವಾದವಾಗಿ ಕೋರ್ಟ್ ನಲ್ಲಿದೆ. ಕೋರ್ಟ್ ನಲ್ಲಿ ಎಲ್ಲ ಆಸ್ತಿಗಳನ್ನು ಕುರಿತು ನಿರ್ದೇಶನ ನೀಡಿ, ಪರಭಾರೆ ಮಾಡಬಾರದು ಎಂದು ಹೇಳಿದೆ. ಜಿಲ್ಲಾಧಿಕಾರಿಗಳು ತಹಶೀಲ್ದಾರ್ ಅವರಿಗೆ ಪತ್ರ ಬರೆದಿದ್ದಾರೆ. ಕೋರ್ಟ್ ನಲ್ಲಿ ಇತ್ಯರ್ಥವಾಗುವ ತನಕ ವಿರಕ್ತಮಠದ ಆಸ್ತಿ ಯಾರಿಗೂ ಪರಭಾರೆ ಮಾಡಬಾರದು ಎಂದಿದೆ. ನಿಮ್ಮ ಮಠದ ಆಸ್ತಿಯಲ್ಲಿ ವಕ್ಫ್ ಎಂದು ಬಂದಾಗ ನೀವು ಅರ್ಜಿ ಯಾಕೆ ಕೊಡಲಿಲ್ಲ ಎಂದು ಪ್ರಶ್ನಿಸಿದರು.



ಇಲ್ಲಿ ನೋಟಿಸ್ ಕೊಡುತ್ತಿರುವುದು ರೈತರ ಆಸ್ತಿಗಳನ್ನು ಕಿತ್ತುಕೊಳ್ಳುವುದಲ್ಲ. ವಕ್ಫ್ ಆಸ್ತಿ ಎಷ್ಟಿದೆ ಅನ್ನೋದು ತಿಳಿದುಕೊಂಡು ಅದನ್ನು ಸಂರಕ್ಷಣೆ ಮಾಡುವುದು. ಸಿಂದಗಿಯಲ್ಲಿ 143 ಪ್ರಕರಣಗಳಿವೆ. ಇದರಲ್ಲಿ 63 ಪರಭಾರೆಯಾಗಿವೆ. ಕಲಂ 9ರಲ್ಲಿ ಇದ್ದರೆ ತೆಗೆಯಲು ಸಾಧ್ಯವಿಲ್ಲ. ಕಲಂ 11ರಲ್ಲಿದೆ. ಇದನ್ನು ತೆಗೆಯಬಹುದು. ಹೀಗಾಗಿ ದಾಖಲೆಗಳನ್ನು ತಂದು ಕೊಡಿ ಎಂದು ಕೇಳುತ್ತಿದ್ದಾರೆ. ಇಂಡಿ ತಾಲೂಕಿನ ತನಿಹಳ್ಳಿಯಲ್ಲಿ ಯಮನಪ್ಪ ಮಲಕಪ್ಪ ಕಂಗನಾಳ ಆಸ್ತಿಯಲ್ಲಿ ಕರ್ನಾಟಕ ವಕ್ಫ್ ಬೋರ್ಡ್ ಎಂದು ಇತ್ತು. ಅವರು ದಾಖಲೆ ನೀಡಿದ್ದಾರೆ, ಅದನ್ನು ಇಗ ತೆಗೆದು ಹಾಕಲಾಗಿದೆ ಎಂದು ದಾಖಲೆಗಳನ್ನು ತೋರಿಸಿದರು."ವಕ್ಫ್ ವಿಚಾರಕ್ಕೆ ಸಂಬಂಧಿಸಿದಂತೆ ಬಿಜೆಪಿಯವರು ಉಪ ಚುನಾವಣೆ ದೃಷ್ಟಿಯಿಂದ ವಿವಾದ ಮಾಡುತ್ತಿದ್ದಾರೆ. ಇದರ ಬಗ್ಗೆ ಧ್ವನಿ ಎತ್ತಿದ ಬಸನಗೌಡ ಪಾಟೀಲ ಯತ್ನಾಳ್, ಸಂಸದರಾದ ರಮೇಶ ಜಿಗಜಿಣಗಿ ರವರ ಹೆಸರನ್ನೇ ಬಿಜೆಪಿ ನಿಯೋಗದಲ್ಲಿ ಇರಲಿಲ್ಲ. ಕಾರ್ಯಕರ್ತರು ಗಲಾಟೆ ಮಾಡಿದ ಬಳಿಕ ಸೇರಿಸಿದ್ದಾರೆ. ಮೊದಲು ಯತ್ನಾಳ್, ವಿಜಯೇಂದ್ರ ತಮ್ಮನ್ನು ತಾವೂ ಸರಿಪಡಿಸಿಕೊಳ್ಳಲಿ" ಎಂದ ಶಾಸಕ ಅಶೋಕ ಮನಗೂಳಿ, ವಕ್ಫ್ ಅದಾಲತ್ ಮಾಡಿರುವ ಉದ್ದೇಶ ಸಹ ವಿವಾದಿತ ಜಾಗಗಳ ಸಮಸ್ಯೆಗಳನ್ನು ಇತ್ಯರ್ಥಗೊಳಿಸುವುದಾಗಿದೆ. ವಿಜಯಪುರದಲ್ಲಿ ನಡೆದ ವಕ್ಫ್ ಅದಾಲತ್ ನಲ್ಲಿ ಪೂರ್ತಿಯಾಗಿ ಭಾಗವಹಿಸಿದ್ದೇನೆ. ಇಲ್ಲಿ ರೈತರ ಕುರಿತು ಚರ್ಚೆಯಾಗಿಲ್ಲ. ಮುಸ್ಲಿಂ ಸಮುದಾಯಗಳಿಂದಲೂ ಅನೇಕ ದೂರುಗಳು ಬಂದಿವೆ. ಎಷ್ಟೋ ಮುಸ್ಲಿಂರಿಗೂ ನೋಟಿಸ್ ಕೊಡಲಾಗಿದೆ. ಸಿಂದಗಿ ತಾಲೂಕಿನ ರೈತರು, ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ. ಯಾವುದೇ ಆಸ್ತಿಗಳನ್ನು ವಾಪಸ್ ಪಡೆಯುವ ಯಾವ ಉದ್ದೇಶ ನಮ್ಮ ಸರ್ಕಾರಕ್ಕೆ ಇಲ್ಲ. ದಾಖಲೆಗಳನ್ನು ಸಲ್ಲಿಸಿದರೆ ಅದು ಸರಿಪಡಿಸಿಕೊಡಲಾಗುವುದು ಎಂದು ಹೇಳಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಪೂಜಾರ ಕಾಂಗ್ರೆಸ್ ಮುಖಂಡರಾದ ಎಸ್.ಎಂ ಪಾಟೀಲ ಗಣಿಯಾರ, ಮಲ್ಲಣ್ಣ ಸಾಲಿ, ಚನ್ನು ವಾರದ, ಪರಶುರಾಮ ಕಾಂಬ್ಳೆ, ಪ್ರವೀಣ ಕಂಟಿಗೊಂಡ ಸೇರಿ ಇತರರು ಉಪಸ್ಥಿತರಿದ್ದರು.

# ಕಿತ್ತೂರಿನ ಇತಿಹಾಸ ರಾಷ್ಟ್ರಮಟ್ಟಕ್ಕೆ ಪರಿಚಯಿಸುವುದು ನಮ್ಮೆಲ್ಲರ ಜವಾಬ್ದಾರಿ



**ಬೆಳಗಾವಿ :** ಕಿತ್ತೂರು ಉತ್ಸವ –2024 ಹಾಗೂ ಚನ್ನಮ್ಮನ ವಿಜಯೋತ್ಸವದ 200 ನೇ ವರ್ಷದ ಆಚರಣೆಯನ್ನು ಈ ಬಾರಿ ವಿಶಿಷ್ಟವಾಗಿ ಆಚರಿಸಲಾಗುತ್ತಿದೆ. ಕಿತ್ತೂರಿನ ಇತಿಹಾಸ ವನ್ನು ರಾಜ್ಯಕ್ಕೆ ಸೀಮಿತಗೊಳಿಸದೇ ರಾಷ್ಟ್ರಮಟ್ಟಕ್ಕೆ ಕೊಂಡೊಯ್ಯಬೇಕಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಚನ್ನಮ್ಮನ ಕಿತ್ತೂರಿನ ಕೋಟೆ ಆವರಣದಲ್ಲಿ ಕಿತ್ತೂರು ಚನ್ನಮ್ಮ ಮುಖ್ಯ ವೇದಿಕೆಯಲ್ಲಿ ಬುಧವಾರ ಜರುಗಿದ ಕಿತ್ತೂರು ಉತ್ಸವ–2024 ವಿಜಯೋತ್ಸವದ 200ನೇ ವರ್ಷಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಣಿ ಚನ್ನಮ್ಮನ ಆದರ್ಶಗಳನ್ನು ನಾವೆಲ್ಲ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಕಳೆದ ಸಾಲಿನಿಂದ ಲೋಕೋಪಯೋಗಿ ಇಲಾಖೆ ವತಿಯಿಂದ ಕಿತ್ತೂರು ಅಭಿವೃದ್ಧಿಗೆ ಸಾಕಷ್ಟು ಅನುದಾನ ನೀಡಲಾಗುತ್ತಿದೆ. ಮುಂದೆಯೂ ಕೂಡ ಕಿತ್ತೂರು ಅಭಿವೃದ್ಧಿಗೆ ಅನುದಾನ ನೀಡಲಾಗುವುದು ಎಂದರು.

ಕಿತ್ತೂರು ಇತಿಹಾಸ ಅಧ್ಯಯನ ಕೇಂದ್ರವನ್ನು ವಿಜಯಪುರದಿಂದ ಬೆಳಗಾವಿಗೆ ಸ್ಥಳಾಂತರಿಸಲಾಗುವುದು. ರಾಣಿ ಚನ್ನಮ್ಮವಿಶ್ವವಿದ್ಯಾಲಯವನ್ನು ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಎಂದು ನಾಮಕರಣ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಅವರು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಮಾತನಾಡಿ, ಕಿತ್ತೂರು ನಾಡು ಸ್ವಾಭಿಮಾನದ ನಾಡಾಗಿದೆ. ಹೆಣ್ಣು ಮಕ್ಕಳು ಮನೆಯಿಂದ ಹೊರಬರದಂತಹ ಕಾಲದಲ್ಲಿ ರಾಣಿಚನ್ನಮ್ಮ ಬ್ರಿಟಿಷರ ವಿರುದ್ಧ ಕೆಚ್ಚೆದೆಯಿಂದ ಹೋರಾಡಿದ ಧೀರ ಮಹಿಳೆಯಾಗಿದ್ದಳು ಎಂದರು. ರಾಜ್ಯ ಸರ್ಕಾರವು ಬಡವರ ಶ್ರೇಯೋಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ಜಾರಿ ಮಾಡಿದ್ದು ವಿಶೇಷವಾಗಿ

ಮಹಿಳೆಯರನ್ನು ಆರ್ಥಿಕವಾಗಿ ಸದೃಢ ವಾಗಿಸುವ ನಿಟ್ಟಿನಲ್ಲಿ ಗೃಹಲಕ್ಷ್ಮೀ ಯೋಜನೆ ಜಾರಿ ಮಾಡಲಾಗಿದೆ ಎಂದು ನುಡಿದರು.

ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಮಾತನಾಡಿ, ವಿಜಯೋತ್ಸವದ ಉತ್ಸಾಹ ಕೇವಲ ಕಿತ್ತೂರಿಗೆ ಸಿಮಿತವಾಗದೆ ಇಡೀ ವಿಶ್ವಕ್ಕೆ ಪ್ರೇರಣೆಯಾಗಿದೆ. ಕಿತ್ತೂರು ಉತ್ಸವ ಜನರ ಉತ್ಸವಾಗಿದೆ. ಇದು ಕೇವಲ ವಿಜಯೋತ್ಸವವಾಗದೇ ಪ್ರೇರಣಾ ಉತ್ಸವವಾಗಲಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕರಾದ ಬಾಬಾಸಾಹೇಬ ಪಾಟೀಲ ಅವರು ಮಾತನಾಡಿ ಕಿತ್ತೂರು ಕೋಟೆಯ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದರು.

ಕಿತ್ತೂರು ಚನ್ನಮ್ಮನ ಸಂಶೋಧನೆ ಕೇಂದ್ರವನ್ನು ಕಿತ್ತೂರಿಗೆ ಒದಗಿಸಲು ಕೋರಿಕೆ ಇಟ್ಟ ಅವರು, ವಿಜಯೋತ್ಸವದ 200ನೇ ವರ್ಷದ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ನಮ್ಮೆಲ್ಲರ ಭಾಗ್ಯವಾಗಿದೆ ಎಂದು ನುಡಿದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಚನ್ನಮ್ಮನ ಕಿತ್ತೂರಿನ ರಾಜಗುರು ಸಂಸ್ಥಾನ ಮಠದ ಮಡಿವಾಳ ರಾಜಯೋಗಿಂದ್ರ ಮಹಾಸ್ವಾಮಿ, ನಿಚ್ಚಣಕಿಯ ಶ್ರೀ ಗುರು ಮಡಿವಾಳೇಶ್ವರ ಮಠದ ಪಂಚಾಕ್ಷರಿ ಮಹಾಸ್ವಾಮಿಗಳು, ಬೈಲೂರು ನಿಷ್ಕಲ ಮಂಟಪದ ನಿಜಗುಣಾನಂದ ಸ್ವಾಮಿಜಿಗಳು ಆಶೀರ್ವಚನ ನೀಡಿದರು.

ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ರಾಜು(ಆಸೀಫ್) ಸೇಠ, ಜಿಲ್ಲಾ ಪೊಲಿಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ಜಿ.ಪಂ.ಸಿ.ಇ.ಓ ರಾಹುಲ್ ಶಿಂಧೆ , ಚೀಫ್ ಪೊಸ್ಟ್ ಮಾಸ್ಟರ್ ಜನರಲ್ ಎಸ್.ರಾಜೇಂದ್ರ ಕುಮಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಕೆ.ಎಚ್. ಚನ್ನೂರ, ಉಪನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕಿ ಸೌಮ್ಯ ಗುಳೇದ ಸೇರಿದಂತೆ ಗಣ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.

ಬೈಲಹೊಂಗಲ್ ಉಪವಿಭಾಗಾಧಿಕಾರಿ ಪ್ರಭಾವತಿ ಫಕೀರಪುರ ಸ್ವಾಗತಿಸಿದರು.

# ರಾಷ್ಟ್ರೀಯ ಆಯುರ್ವೇದ ದಿನಾಚರಣೆ: ಉಪನ್ಯಾಸ

**ಧಾರವಾಡ :** ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಧಾರವಾಡ ಜಿಲ್ಲಾ ಆಯುಷ್ ಇಲಾಖೆ ಮತ್ತು ಆಯುಷ್ ನಿರ್ದೇಶನಾಲಯ ಬೆಂಗಳೂರು ಆಶ್ರಯದಲ್ಲಿ ಪ್ರಸಕ್ತ ಸಾಲಿನ 9ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯ ಪ್ರಯುಕ್ತ ಜಾಗತಿಕ ಆರೋಗ್ಯಕ್ಕಾಗಿ ಆಯುರ್ವೇದದ ಆವಿಷ್ಕಾರಗಳು ಹಾಗೂ ಮಹಿಳಾ ಸಬಲೀಕರಣಕ್ಕಾಗಿ ಆಯುರ್ವೇದ ಎಂಬ ಘೋಷ ವಾಕ್ಯದೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸಭಾಭವನದಲ್ಲಿ ಮಹಿಳೆಯರ ಯೋಗಕ್ಷೇಮದಲ್ಲಿ ಆಯುರ್ವೇದದ ಪಾತ್ರ ಎಂಬ ವಿಷಯದ ಬಗ್ಗೆ ಸ್ತ್ರೀಶಕ್ತಿ,



ಆಶಾ, ಅಂಗನವಾಡಿ ಕಾರ್ಯಕರ್ತರಿಗೆ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಆರೋಗ್ಯಾಧಿಕಾರಿ ಡಾ. ಶಶಿ ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿಯ ಮಹಾಗಣಪತಿ ಆಯುರ್ವೇದ ಮಹಾವಿದ್ಯಾಲಯ ಉಪನ್ಯಾಸಕ ಡಾ. ಶಿವಕುಮಾರ ಕುಂಬಾರ ಅವರು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ 200 ಸ್ತ್ರೀಶಕ್ತಿ, ಆಶಾ, ಅಂಗನವಾಡಿ ಕಾರ್ಯಕರ್ತರು ಭಾಗವಹಿಸಿದ್ದರು.

ಆರ್‌ಸಿಎಚ್‌ಓ ಅಧಿಕಾರಿ ಡಾ. ಸುಜಾತ ಹಸವೀಮಠ ಮತ್ತು ಜಿಲ್ಲಾ ಆಯು? ಇಲಾಖೆಯ ಅಧಿಕಾರಿಗಳಾದ ಡಾ. ಸಂತೋಷ ತಾಡಪತ್ರಿ, ಸಹಾಯಕ ಆಡಳಿತಾಧಿಕಾರಿ ಅಶೋಕ ಅಕ್ಕೇರಿ, ಆನಂದ ಹಟ್ಟೇನ್ನವರ, ರಾಜೇಶ್ವರಿ ಭರಮಣ್ಣವರ, ಮಹಾಂತೇಶ ಕಾಲವಾಡ ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

# ಜಮಖಂಡಿ ತಾಲೂಕ ಛಲವಾದಿ ಮಹಾಸಭಾ ಪದಾಧಿಕಾರಿಗಳ ಆಯ್ಕೆ



**ಜಮಖಂಡಿ :** ನಗರದ ರಮಾ ನಿವಾಸದಲ್ಲಿ ಛಲವಾದಿ ಮಹಾಸಭಾ ಸಹಯೋಗದಲ್ಲಿ ಜಿಲ್ಲಾ ಛಲವಾದಿ ಮಹಾಸಭಾ ನೇತೃತ್ವದಲ್ಲಿ ನಡೆದ ಜಮಖಂಡಿ ತಾಲೂಕ ಛಲವಾದಿ ಮಹಾಸಭಾ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಬಾಗಲಕೋಟ ಜಿಲ್ಲಾ ಛಲವಾದಿ ಮಹಾಸಭಾ ನೇತೃತ್ವದಲ್ಲಿ ಜಮಖಂಡಿ ತಾಲೂಕಾ ಛಲವಾದಿ ಮಹಾಸಭಾ ತಾಲೂಕಾಧ್ಯಕ್ಷರಾಗಿ ಶಶಿಕಾಂತ ಎನ್ ತೇರದಾಳ ಅವರನ್ನು ಆಯ್ಕೆ ಮಾಡಲಾಯಿತು.

ಉಪಾಧ್ಯಕ್ಷರಾಗಿ ರವಿ ದೊಡಮನಿ. ಗೌರವಾಧ್ಯಕ್ಷರಾಗಿ ರವಿ ಶಿಂಗೆ. ಪ್ರಧಾನ ಕಾರ್ಯದರ್ಶಿಯಾಗಿ ದಿಲೀಪ ದಾಶ್ಯಾಳ. ಕಾರ್ಯದರ್ಶಿಯಾಗಿ ಲಕ್ಷ್ಮಣ ಕಾಂಬಳೆ. ಸಂಘಟನಾ ಕಾರ್ಯದರ್ಶಿಯಾಗಿ ರಾಘವೇಂದ್ರ ಆಲಬಾಳ. ಸಹ ಸಂಘಟನಾಕಾರ್ಯದರ್ಶಿಯಾಗಿ ಸಂತೋಷಸುತಾರ.ಖಜಾಂಚಿ–ಯಾಗಿ ರಾಜು ಪೋತರಾಜ. ಪ್ರಚಾರ ಸಮಿತಿ ಅಧ್ಯಕ್ಷರಾಗಿ ರವಿ ಜಂಬಗಿ. ಉಪಾಧ್ಯಕ್ಷರಾಗಿ ಭರತೇಶ ಪಾನಕ್ಕನ್ನವರ. ಕಾನೂನು ಸಲಹಾ ಸಮಿತಿ ಅಧ್ಯಕ್ಷ ಶರಣಕುಮಾರ ಕಂಬಾಗಿ. ಸಾಬು ನಾಟೀಕರ. ಸಲಹಾ ಸಮಿತಿ ಸದಸ್ಯರಾಗಿ ಪ್ರಶಾಂತ ನೀಲನಾಯಕ. ಪ್ರೇಮ ನಾಗನೂರ. ರಾಘವೇಂದ್ರ ನಾಟೀಕರ. ಸುಭಾಸ ರಬಕವಿ. ಮಂಜುನಾಥ ನಾಕ್ಕೂರ. ಸುರೇಶ ಕಾಂಬಳೆ. ಗಂಗಪ್ಪ ಪೂಜಾರಿ ಅವರನ್ನು ಆಯ್ಕೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾದ್ಯಕ್ಷ ವಿವೇಕಾನಂದ ಗರಸಂಗಿ. ಜಿಲ್ಲಾ ಸಮಿತಿ ಸದಸ್ಯರಾದ ಕುಶಾಲ ವಾಗಮೋರೆ. ಸುಭಾಸ ಬದಾಮಿ. ಶ್ರೀಧರ ಚಿಕ್ಕಲಕಿ. ರಾಮಣ್ಣ ಹಿರೇಮನಿ. ಸಂಗಪ್ಪ ನಾರಾಯಣಿ. ಡಿ.ಎಸ್.ಜೈಭೀಮ. ಸುರೇಶ ನಂದಿ ಸೇರಿದಂತೆ ಅನೇಕರು ಇದ್ದರು.

# ಸುಜ್ಞಾನ ನಿಧಿ ಶಿಷ್ಯವೇತನ ಮಂಜೂರಾತಿ ಪತ್ರ ವಿತರಣೆ

**ವಿಜಯಪುರ :** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ವಿಜಯಪುರ 2 ತಾಲೂಕಾ ವ್ಯಾಪ್ತಿಯ 45 ವಿದ್ಯಾರ್ಥಿಗಳಿಗೆ ಸುಜ್ಞಾನ ನಿಧಿ ಶಿಷ್ಯ ವೇತನ ಮಂಜೂರಾತಿ ಪತ್ರ ವಿತರಣಾ ಕಾರ್ಯಕ್ರಮ ಇತ್ತೀಚೆಗೆ ಜರುಗಿತು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಜಿಲ್ಲಾ ನಿರ್ದೇಶಕರಾದ ಶ್ರೀ ಸಂತೋಷಕುಮಾರ ರೈ ಅವರು ಸುಜ್ಞಾನ ನಿಧಿ ಶಿಷ್ಯ ವೇತನ ಮಂಜೂರಾತಿ ಪತ್ರ ವಿತರಣಾ ಕಾರ್ಯಕ್ರಮವನ್ನು ದೀಪ ಬೆಳಗಿಸುವುದರ ಮೂಲಕ ಚಾಲನೆ ನೀಡಿದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಅನೇಕ ಸಮುದಾಯದ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದ್ದು ಹಾಲು ಉತ್ಪಾದಕರ ಕಟ್ಟಡ ರಚನೆಗೆ ಅನುದಾನ, ಶುದ್ಧಗಂಗಾ ಕುಡಿಯುವ ನೀರಿನ ಘಟಕ, ನಿರ್ಗತಿಕರ ಮಾಶಾಸನ ವಿತರಣೆ, ಕೆರೆ ಹೂಳೆತ್ತುವ ಕಾರ್ಯಕ್ರಮ, ಇತ್ಯಾದಿಗಳ ಬಗ್ಗೆ ಮಾಹಿತಿ ನೀಡಿದರು. ಇಲ್ಲಿಯವರೆಗೆ ನಮ್ಮ ಸಂಸ್ಥೆಯಿಂದ ರಾಜ್ಯದಾದ್ಯಂತ ಸುಮಾರು 97 ಸಾವಿರ ವಿದ್ಯಾರ್ಥಿಗಳಿಗೆ 114 ಕೋಟಿ ರೂ. ಅನುದಾನದ ಸುಜ್ಞಾನ ನಿಧಿ ಶಿಷ್ಯವೇತನ ವಿತರಣೆ ಮಾಡಲಾಗಿದೆ ಎಂದರು.

ಪ್ರಸ್ತುತ ವರ್ಷದಲ್ಲಿ ವಿಜಯಪುರ 2 ತಾಲೂಕಿನಲ್ಲಿ 45 ವಿದ್ಯಾರ್ಥಿಗಳಿಗೆ ಮಂಜೂರಾತಿಯಾಗಿದ್ದು ಇದನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ವಿದ್ಯಾಭ್ಯಾಸಕ್ಕೆ ಉಪಯೋಗಿಸಿ ಸದ್ಬಳಕೆ ಮಾಡಿಕೊಳ್ಳಬೇಕು ಎಂದರಲ್ಲದೆ ವಿದ್ಯಾರ್ಥಿಯು ಆಯ್ಕೆ ಮಾಡಿದ ಕೋರ್ಸ್ ಮುಗಿಯುವವರೆಗೂ ವಿದ್ಯಾರ್ಥಿ ವೇತನ ಸಿಗಲಿದೆ. ಇದಕ್ಕೆ ಪ್ರತಿವರ್ಷ ನವೀಕರಣ ಮಾಡಬೇಕು ಎಂದು ತಿಳಿಸಿದರು.

ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯು ಸುಜ್ಞಾನ ನಿಧಿ ಮಾತ್ರವಲ್ಲದೆ ವೃತ್ತಿ ಕೌಶಲ್ಯ ಹಾಗೂ ಮಹಿಳೆಯರ ಸ್ವಉದ್ಯೋಗಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಒತ್ತು ನೀಡಿದ್ದು ಪಾಲಕ, ಪೋಷಕರು ವಿದ್ಯಾರ್ಥಿಗಳ ಶಿಕ್ಷಣದಲ್ಲಿ ತಮ್ಮ ಪಾತ್ರ ಅರಿತುಕೊಂಡು ಅದನ್ನು ಉತ್ತಮ ರೀತಿಯಲ್ಲಿ ಅನುಷ್ಠಾನಗೊಳಿಸಬೇಕು. ಡಾ. ವೀರೇಂದ್ರ ಹೆಗ್ಗಡೆಯವರು ಆರ್ಥಿಕ ನೆರವನ್ನು ನೀಡುತ್ತಿರುವುದು ನಮ್ಮೆಲ್ಲರ ಪುಣ್ಯ. ಈ ಯೋಜನೆಯನ್ನು ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ಮಾನವೀಯ ನೆಲೆಯಲ್ಲಿ ನಿಸ್ವಾರ್ಥ ಸಮಾಜ ಸೇವೆ ಮಾಡುವಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮುಂಚೂಣಿಯಲ್ಲಿದೆ.

ಪ್ರತಿಯೊಬ್ಬ ಬಡವರ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದೆಂಬ ದೃಷ್ಟಿಯಿಂದ ಸುಜ್ಞಾನ ನಿಧಿ ಶಿಷ್ಯವೇತನ ನೀಡಲಾಗುತ್ತಿದೆ. ಮಕ್ಕಳು ಸಮಾಜದ ಮುಖ್ಯವಾಹಿನಿಗೆ ಬರಬೇಕು. ವೃತ್ತಿಪರ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳು ಸುಜ್ಞಾನ ನಿಧಿ ಶಿಷ್ಯವೇತನದ ಸದುಪಯೋಗ ಪಡೆಯಿರಿ. ಜೊತೆಗೆ ಉದ್ಯೋಗವನ್ನು ಪಡೆಯಬಹುದು ಎಂದರು. ಈ ಸಂದರ್ಭದಲ್ಲಿ ಎ. ಎಸ್. ಐ. ಶ್ರೀಧರ್ ಪತ್ತಾರ್, ಸಂತೋಷ ಕುಮಾರ್ ರೈ, ವಿಜಯಪುರ 02 ಯೋಜನಾಧಿಕಾರಿ, ಸತೀಶ, ಕೃಷಿ ಮೇಲ್ವಿಚಾರಕರಾದ ವೆಂಕಟೇಶ್ ಗಡ್ಡಿ ಸೇರಿದಂತೆ ಪ್ರಗತಿ ಬಂಧು ಸ್ವ ಸಹಾಯ ಸಂಘದ ಫಲಾನುಭವಿಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಎಸ್.ಕೆ. ಮಹಾವಿದ್ಯಾಲಯದಲ್ಲಿ ಕಿತ್ತೂರು ಚನ್ನಮ್ಮಳ ಜಯಂತೋತ್ಸವ ಆಚರಣೆ



**ತಾಳಿಕೋಟೆ :** ಬ್ರಿಟಿಷರ ವಿರುದ್ಧ ಯುದ್ಧದ ಸಮರಸಾರಿ ಭಾರತದ ಸ್ವಾತಂತ್ರ್ಯದ ಕಿಚ್ಚನ್ನು ಯುವ ಜನತೆಯಲ್ಲಿ ಮೊಳಗಿಸಲು ಟೆ–ಊಂಕ ಕಟ್ಟಿ ನಿಂತು ದೇಶದ ಸ್ವಾಭಿಮಾನವನ್ನು ಎತ್ತಿ ಹಿಡಿದ ವೀರಮಾತೆ ಕಿತ್ತೂರು ಚನ್ನಮ್ಮ ನಮಗೆಲ್ಲಾ ಆದರ್ಶವಾಗಿದ್ದಾರೆಂದು ವೀ.ವಿ.ಸಂಘದ ಸಹ ಕಾರ್ಯದರ್ಶಿ ಕಾಶಿನಾಥ ಮುರಾಳ ಹೇಳಿದರು

ಶ್ರೀ ಎಸ್.ಕೆ.ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಲಾದ ಕಿತ್ತೂರ ರಾಣಿ ಚೆನ್ನಮ್ಮಳ 246ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ವೀರ ಮಹಾ ಪುರುಷರ ಜೀವನ ಚರಿತ್ರೆಗಳು ಕೇವಲ ತೋರಿಕೆಗಾಗಿ ಹಾಕಲಾಗುತ್ತಿದೆ ಹಾಗೆ ಆಗಬಾರದು ಅವರ ಇತಿಹಾಸ ಒಂದೊಂದು ತರಗತಿಗಳಲ್ಲಿ ವಿವರಿಸುವಂತಹ ಕಾರ್ಯವಾಗಬೇಕು ಇದರಿಂದ ರಾಷ್ಟ್ರ ಭಕ್ತಿ ಇಂದಿನ ಯುವಕರಲ್ಲಿ ತುಂಬಲು ಸಾದ್ಯವಾಗಲಿದೆ ಅಲ್ಲದೇ ಪಾಲಕರೂ ಕೂಡಾ ಮನೆಯಲ್ಲಿ ಮಕ್ಕಳಿಗೆ ಮಹಾ ಪುರುಷರ ಕಥೆಗಳನ್ನು ವಿವರಿಸುವಂತಹ ಕಾರ್ಯವಾಗಬೇಕೆಂದರು.

ಮಹಾವಿದ್ಯಾಲಯದ ಉಪನ್ಯಾಸಕರಾದ ವಾಯ್.ಎಚ್. ಅಂಗಡಗೇರಿಯವರು ಮಾತನಾಡಿ ಬ್ರಿಟಿಷ್ ಅಧಿಕಾರಿ ಧಾರವಾಡದ ಕಲೆಕ್ಟರ್ ಥ್ಯಾಕರೆಯನ್ನು ಗುಂಡಿಕ್ಕಿ ಕೊಂದು ಈ ನಾಡನ್ನು ಉಳಿಸಿದ ಕೀರ್ತಿ ಕಿತ್ತೂರು ಸಂಸ್ಥಾನಕ್ಕೆ ಸಲ್ಲುತ್ತದೆ ಎಂದರು.ಪ್ರಾಚಾರ್ಯರ ಡಾ. ಆರ್.ಎಮ್. ಬಂಟನೂರ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಎಲ್ಲಾ ಉಪನ್ಯಾಸಕರು ಸಿಬ್ಬಂದಿ ವರ್ಗ ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ಪ್ರಶಿಕ್ಷಣಾರ್ಥಿ ಉದಯ ಕಟ್ಟಿಮನಿ ಸ್ವಾಗತಿಸಿದರು. ಪ್ರಶಿಕ್ಷಣಾರ್ಥಿ ಉಮೇಶ ಮುರಗೊಂಡ ವಂದಿಸಿದರು. ಪ್ರಶಿಕ್ಷಣಾರ್ಥಿ ಮೊಮ್ಮದರಫೀಕ ತಹಶೀಲ್ದಾರ ನಿರೂಪಿಸಿದರು.

# ಸಾಧನೆಗೆ ಗುರಿ ಮುಖ್ಯ



**ಧಾರವಾಡ :** ಸಾಧನೆಗೆ ಗುರಿ ಅತಿ ಮುಖ್ಯ, ಗುರಿ ಸಾಧನೆಯ ಸಮಯದಲ್ಲಿ ಸಮಸ್ಯೆ ಸಹಜ. ಆದರೆ ಗುರಿ ಅಚಲವಾದರೆ ಅಸಾಧಾರಣವಾದ ಸಾಧನೆ ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ನಗರದ ಅಂಜುಮನ್ ಕಲಾವಿಜ್ಞಾನ ಹಾಗೂ ಸ್ನಾತಕೋತ್ತರ ಮಹಾವಿದ್ಯಾಲಯ ಧಾರವಾಡ, ಮಹಿಳಾ ಸಬಲೀಕರಣ ಕೋಶ ಹಾಗೂ ಇತಿಹಾಸ ವಿಭಾಗ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಚಾರ ಸಂಕೀರ್ಣ ಉದ್ಘಾಟಿಸಿ, ಮಾತನಾಡಿದರು.

ಸ್ತ್ರಿಯರಿಗೆ ಮುಕ್ತ ಅವಕಾಶ ನೀಡಿದಾಗ ಪ್ರತಿಭೆ ಹೊರಬರಲು ಸಾಧ್ಯ. ಅದೇ ರೀತಿ ಮಾನಸಿಕ ಚಂಚಲತೆಯಿಂದ ಮುಕ್ತರಾಗಬೇಕು ಹಾಗೂ ಮಹಿಳೆ ಸ್ವಯಂ ಅರಿವು ಬೆಳೆಸಿಕೊಳ್ಳುವುದು ಅತಿ ಮುಖ್ಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಂಜುಮನ್ ಈ ಇಸ್ಲಾಂ ದ ಉಪಾಧ್ಯಕ್ಷರಾದ ಬಶೀರ್ ಅಹಮದ್ ಜಾಗೀರದಾರ ಮಾತನಾಡಿ, ರಾಣಿ ಚೆನ್ನಮ್ಮ ಅವರ ಸಾಧನೆಯನ್ನು ಮುಕ್ತ ಕಂಠದಿಂದ ಪ್ರಶಂಶಿಸಿದರು. ಕಾರ್ಯಕ್ರಮದ ಅಂಗವಾಗಿ ಬಿತ್ತಿ ಚಿತ್ರ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಅಂಜುಮನ್–ಇ–ಇಸ್ಲಾಂ ಸಂಸ್ಥೆಯ ಆಡಳಿತ ಮಂಡಳಿಯ ಕಾರ್ಯದರ್ಶಿ ಡಾ. ಎಸ್. ಎ.ಸರ್ಗಿರೋ, ಖಜಾಂಚಿ ಮಹಮ್ಮದ್ ರಫಿಕ್ ಶಿರಹಟ್ಟಿ, ಪ್ರಾಚಾರ್ಯ ಡಾ. ಎನ್.ಎಂ.ಮಕಾಂದಾರ್ ಹಾಗೂ ಐ.ಕ್ಯೂ. ಎ.ಸಿ ಸಂಯೋಜಕ ಡಾ. ಎನ್. ಬಿ.ನಲತವಾಡ, ಪತ್ರಗಾರ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕಿ ಡಾ.ಮಂಜುಳಾ ಎಲಿಗಾರ ವೇದಿಕೆಯಲ್ಲಿ ಇದ್ದರು.

ಕಾರ್ಯಕ್ರಮದಲ್ಲಿ ಅಂಜುಮನ್ ಇಸ್ಲಾಂ ಸಂಸ್ಥೆಯ ಆಡಳಿತ ವರ್ಗದವರಾದ ಖೈರುದ್ದೀನ್ ಶೇಕ್, ಯಾಸಿನ್ ಹಾವೇರಿ ಪೇಟ್ ,ನಜೀರ್ ಬಲಬಟ್ಟಿ, ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಒತ್ತು: ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಧರ್ಮಸಿಂಗ್



**ಕೊಪ್ಪಳ :** ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಒತ್ತು ನೀಡುವ ಉದ್ದೇಶದಿಂದ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ನಮ್ಮ ಸರಕಾರ ಪ್ರತಿವರ್ಷ 5 ಸಾವಿರ ಕೋಟಿ ರೂ. ಅನುದಾನವನ್ನು ನೀಡುತ್ತಿದೆ ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಡಾ. ಅಜಯ್ ಧರ್ಮಸಿಂಗ್ ಹೇಳಿದರು.

ಅವರು ಬುಧವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ನಾನು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷನಾದ ಮೇಲೆ ಅಕ್ಷರ ಆವಿಷ್ಕಾರ. ಉದ್ಯೋಗ ಆವಿಷ್ಕಾರ. ಆರೋಗ್ಯ ಆವಿಷ್ಕಾರ ಸೇರಿದಂತೆ ಹಲವಾರು ವಿನೂತನ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗಿದೆ. ಕೆ.ಕೆ. ಆರ್.ಡಿ. ಬಿ ಅನುದಾನದಲ್ಲಿ ಶೇ. 25 ಪ್ರತಿಶತ ಹಣವನ್ನು ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗಾಗಿ ಮೀಸಲಿಡಲಾಗಿದೆ ಎಂದರು.

ನಂಜುಂಡಪ್ಪ ವರದಿ ಪ್ರಕಾರ ಹಿಂದುಳಿದ ತಾಲ್ಲೂಕು ಹಾಗೂ ಅತಿ ಹಿಂದುಳಿದ ತಾಲ್ಲೂಕುಗಳಲ್ಲಿ ನಮ್ಮ ಭಾಗದ 21 ತಾಲ್ಲೂಕುಗಳು ಸೇರಿವೆ. ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳಲ್ಲಿ 41 ತಾಲ್ಲೂಕುಗಳಿದ್ದು ಇವುಗಳ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುತ್ತಿದೆ. 45 ಕೋಟಿ ರೂ. ವೆಚ್ಚದಲ್ಲಿ 112 ಬಸ್ಸುಗಳನ್ನು ಖರೀದಿಸುತ್ತಿದ್ದೇವೆ. ನಮ್ಮ ಭಾಗದಲ್ಲಿ 2618 ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ ಎಂದರು.

ಕಳೆದ 10 ವರ್ಷಗಳಲ್ಲಿ ಕೆ.ಕೆ.ಆರ್.ಡಿ.ಬಿ. ಯಿಂದ ಕೊಪ್ಪಳ ಜಿಲ್ಲೆಯ ಒಟ್ಟು 4718 ಕಾಮಗಾರಿಗಳಲ್ಲಿ 3769 ಕಾಮಗಾರಿಗಳು ಪೂರ್ಣಗೊಂಡಿದ್ದು. 864 ಕಾಮಗಾರಿಗಳು ಪ್ರಗತಿಯಲ್ಲಿವೆ. 2024– 25 ನೇ ಸಾಲಿಗೆ ಕೊಪ್ಪಳ ಜಿಲ್ಲೆಯ 5 ತಾಲ್ಲೂಕುಗಳಿಗೆ 238 ಕೋಟಿ ರೂ. ಹಣವನ್ನು ಮೈಕ್ರೋ ಮತ್ತು ಮ್ಯಾಕ್ರೋ ಯೋಜನೆ ಅಡಿಯಲ್ಲಿ ನೀಡಲಾಗಿದೆ ಎಂದರು.

2012 ರಲ್ಲಿ ಮನಮೋಹನ ಸಿಂಗ್ ಅವರು ಪ್ರಧಾನ ಮಂತ್ರಿ ಆಗಿದ್ದಾಗ ನಮ್ಮ ಭಾಗದ ಬಹುದಿನಗಳ ಬೇಡಿಕೆ ಕಲಂ 371 ಜೆ ಜಾರಿಯಾಯಿತು ಇದ–ಕ್ಕೆ ಈ ಭಾಗದ ಜನರ ಹಲವಾರು ವರ್ಷಗಳ ಹೋರಾಟ ಮತ್ತು ಮಲ್ಲಿಕಾರ್ಜುನ ಖರ್ಗೆ ಹಾಗೂ ಧರ್ಮಸಿಂಗ್ ಅವರ ವಿಶೇಷ ಪ್ರಯತ್ನದಿಂದಾಗಿ 371 ಜೆ ಜಾರಿಯಾಯಿತು. ಇದರಿಂದ ನಮ್ಮ ಭಾಗದ ಜನರಿಗೆ ಹಲವಾರು ಸೌಲಭ್ಯಗಳು ಸಿಗುತ್ತಿವೆ ಎಂದು ಹೇಳಿದರು.

ಕೊಪ್ಪಳ ಜಿಲ್ಲೆಯನ್ನು ಜೈನರ ಕಾಶಿ. ಐತಿಹಾಸಿಕ ಆನೆಗೊಂದಿ ಮತ್ತು ಪಕ್ಕದಲ್ಲಿ ಹಂಪಿಯಂತಹ ಐತಿಹಾಸಿಕ ಸ್ಥಳಗಳಿಂದ ಕೂಡಿದ ಇತಿಹಾಸ ಈ ಜಿಲ್ಲೆಗೆ ಇದೆ. ನಿನ್ನೆ ಅಧಿಕಾರಿಗಳನ್ನು ಕ–ರೆದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಸಭೆ ಮಾಡಲಾಗಿದ್ದು ಕೆ.ಕೆ. ಆರ್.ಡಿ.ಬಿ.ಯಿಂದ ನಡೆಯುತ್ತಿರುವ. ರಸ್ತೆ. ಶಾಲಾ ವಸತಿ ಕಟ್ಟಡಗಳು. ಅಂಗನವಾಡಿ ಕೇಂದ್ರಗಳು. ಪ್ರಾಥಮಿಕ ಆರೋಗ್ಯ ಕೇಂದ್ರ. ರಂಗಮಂದಿರ ಸೇರಿದರೆ ಇತರೆ ಮೈಕ್ರೋ ಹಾಗೂ ಮ್ಯಾಕ್ರೋ ಯೋಜನೆ ಅಡಿಯಲ್ಲಿ ನಡೆಯುತ್ತಿರುವ ಹಲವಾರು ಕೆಲಸ ಮತ್ತು ಕಾರ್ಯಗಳನ್ನು ಕಾಲಮಿತಿಯಲ್ಲಿ ಮುಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಈ ಪತ್ರಿಕಾಗೋಷ್ಠಿಯಲ್ಲಿ ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

ವಿವಿಧ ಕಾಮಗಾರಿಗಳ ಪರಿಶೀಲನೆ: ಪತ್ರಿಕಾಗೋಷ್ಠಿಯ ನಂತರ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ವತಿಯಿಂದ ಕೊಪ್ಪಳ ಜಿಲ್ಲೆಯಲ್ಲಿ ನಡೆಯುತ್ತಿರುವ ವಿವಿಧ ಕಾಮಗಾರಿಗಳನ್ನು ಕೆ.ಕೆ.ಆರ್.ಡಿ.ಬಿ ಅಧ್ಯಕ್ಷರು ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಜಿಲ್ಲೆಯ ಪೌರ ಕಾರ್ಮಿಕರಿಗೆ ಆರೋಗ್ಯ ತಪಾಸಣೆ–ಸುರಕ್ಷಾ ಪರಿಕರ ಒದಗಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ



**ವಿಜಯಪುರ :** ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರ ಆರೋಗ್ಯ ಕುರಿತು ತೀವ್ರ ಕಾಳಜಿ ವಹಿಸಿ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ನಡೆಸಬೇಕು. ನಿಗದಿತ ಕನಿಷ್ಠ ವೇತನ ಪಾವತಿ, ಜೀವ ವಿಮೆ ಸೌಲಭ್ಯ, ಉಪಹಾರ, ಸುರಕ್ಷತಾ ಪರಿಕರಗಳನ್ನು ಒದಗಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಮ್ಯಾನ್ಯುವೆಲ್ ಸ್ಕ್ಯಾವೆಂಜರ್ಸ್ ನೇಮಕಾತಿ ನಿಷೇಧ ಮತ್ತು ಪುನರ್ವಸತಿ ಅಧಿನಿಯಮ 2013ರ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಪೌರಕಾರ್ಮಿಕರು, ಸ್ವಚ್ಛತಾ ಕೆಲಸಗಾರರಿಗೆ ಅತ್ಯುತ್ತಮ ಗುಣಮಟ್ಟದ ಪರಿಕರ ಹಾಗೂ ಸಮವಸ್ತ್ರ ಒದಗಿಸಬೇಕು. ಪೌರಕಾರ್ಮಿಕರಿಗೆ ಸುರಕ್ಷತೆ ಬಗ್ಗೆ ಎಚ್ಚರಿಕೆ ವಹಿಸುವಂತೆ ಸುರಕ್ಷಾ ಕಿಟ್–ಪರಿಕರ ಬಗ್ಗೆ ತರಬೇತಿ ಹಮ್ಮಿಕೊಳ್ಳಬೇಕು. ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಖಾಯಂ ನೇರಪಾವತಿ–ಗುತ್ತಿಗೆ ಆಧಾರದ ಇರುವವರಿಗೆ ಕಡ್ಡಾಯವಾಗಿ ಇಎಸ್ಐ, ಪಿಎಫ್ ವಿಮೆ ಸೌಲಭ್ಯ ದೊರಕಿಸಲು ಕ್ರಮ ವಹಿಸಬೇಕು ಎಂದು ಸೂಚಿಸಿದರು.

ನಗರ ಸ್ವಚ್ಛತೆ ಕಾರ್ಯನಿರ್ವಹಿಸುವ ಪೌರಕಾರ್ಮಿಕರಿಗೆ ಪ್ರಥಮಾದ್ಯತೆಯ ಮೇಲೆ ಮೂಲಸೌಲಭ್ಯ ಒದಗಿಸುವಂತೆ ತಿಳಿಸಿದ ಅವರು, ನವೆಂಬರ್ 1 ರೊಳಗೆ ಗೃಹಭಾಗ್ಯ ಯೋಜನೆಯ ಮನೆಗಳನ್ನು ಪೌರಕಾರ್ಮಿಕರಿಗೆ ಹಸ್ತಾಂತರ ಮಾಡುವಂತೆ ಮಹಾನಗರ ಪಾಲಿಕೆಗೆ ಅವರು ಸೂಚನೆ ನೀಡಿದರು.

ಹೊಸದಾಗಿ ಪೌರಕಾರ್ಮಿಕರಿಗಾಗಿ ನಿರ್ಮಿಸಿದ ವಸತಿ ಸಮುಚ್ಚಗಳಿಗೆ ಸೂಕ್ತ ಬಸ್ ಸೌಲಭ್ಯ ಕಲ್ಪಿಸಬೇಕು. ಪೌರಕಾರ್ಮಿಕರ ಮಕ್ಕಳಿಗೆ ಜಿಲ್ಲೆಯಲ್ಲಿರುವ ವಸತಿ ಶಾಲೆಗಳಲ್ಲಿ ಪ್ರವೇಶಾವಕಾಶ ಕಲ್ಪಿಸಲು ಕ್ರಮ ವಹಿಸಬೇಕು. ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಯಂ ಆಗಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಕುರಿತು ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯ ಮಹಾನಗರ ಪಾಲಿಕೆ ಸೇರಿದಂತೆ 15 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಯಾವುದೇ ಮ್ಯಾನುವೆಲ್ ಸ್ಕ್ಯಾವೆಂಜರಗಳು ಇರುವುದಿಲ್ಲ. ಜಿಲ್ಲೆಯಲ್ಲಿ ಒಟ್ಟು 588 ಖಾಯಂ ಪೌರಕಾರ್ಮಿಕರರಿದ್ದು, ಈ ಪೈಕಿ 240 ಪೌರಕಾರ್ಮಿಕರಿಗೆ ಗೃಹಭಾಗ್ಯ ಯೋಜನೆಯಡಿ ವಸತಿ ಸೌಲಭ್ಯ ಕಲ್ಪಿಸಲಾಗಿದೆ. ಬಿಎಲ್‌ಸಿ–124, ಎಎಚ್‌ಪಿ–116 ಸೇರಿದಂತೆ ಒಟ್ಟು 240 ಮನೆಗಳು ಅನುಮೋದನೆಗೊಂಡು 131 ಮನೆಗಳು ಮುಕ್ತಾಯಗೊಂಡಿವೆ. ಬಾಕಿ ಉಳಿದ ಮನೆಗಳ ಕಾಮಗಾರಿ ಪ್ರಗತಿಯಲ್ಲಿವೆ. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 56 ಫಲಾನುಭವಿಗಳಿಗೆ ಮನೆಗಳ ಹಕ್ಕು ಪತ್ರ ನೀಡಲಾಗಿದೆ. ಜಿಲ್ಲೆಯ ವಿವಿಧ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ನಿಯಮಿತವಾಗಿ ವೇತನ ಹಾಗೂ ಇಎಸ್ಐ ಮತ್ತು ಇಪಿಎಫ್‌ಗಳನ್ನು ಪಾವತಿಸಲಾಗಿದೆ ಎಂದು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬದ್ರೂದ್ದಿನ ಸೌದಾಗರ ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಇಂಡಿ ಉಪವಿಭಾಗಾಧಿಕಾರಿ ಅಬೀದ ಗದ್ಯಾಳ, ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ರಾಠೋಡ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಪುಂಡಲಿಕ ಮಾನವರ, ಮಹಾನಗರ ಪಾಲಿಕೆ ಪರಿಸರ ಅಭಿಯಂತರ ಸಜ್ಜನ, ಪುರಸಭೆ ಮತ್ತು ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಂಡಸ್ಟ್ರಿಯಲ್ ಲಿಂಕೇಜ್ ಸೆಲ್ ಯೋಜನೆ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಟಿ. ಭೂಬಾಲನ್ ಸೂಚನೆ



**ವಿಜಯಪುರ :** ಜಿಲ್ಲೆಯಲ್ಲಿರುವ ಕೈಗಾರಿಕೆಗಳಲ್ಲಿ ಅವಶ್ಯಕವಿರುವ ಹುದ್ದೆಗಳಿಗನುಗುಣವಾಗಿ ಸಂಸ್ಥೆಗಳಲ್ಲಿ ಅರ್ಹ ನಿರುದ್ಯೋಗಿಗಳಿಗೆ ಕೌಶಲ್ಯ ತರಬೇತಿ ನೀಡಿ, ತರಬೇತಿ ಪಡೆದ ಯುವಕರಿಗೆ ಕೈಗಾರಿಕೆಗಳಲ್ಲಿ ಉದ್ಯೋಗ ದೊರಕಿಸುವ ಮೂಲಕ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಇಂಡಸ್ಟ್ರೀಯಲ್ ಲಿಂಕೇಜ್ ಸೆಲ್ (ಐಎಲ್‌ಸಿ) ಯೋಜನೆ ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುರುವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಕೌಶಲ್ಯ ಮಿಷನ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಜಿಲ್ಲೆಯಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಇಂಡಸ್ಟ್ರೀಯಲ್ ಲಿಂಕೇಜ್ ಸೆಲ್ (ಐಎಲ್‌ಸಿ) ಯೋಜನೆ ಆರಂಭಿಸಿದ್ದು, ಕೈಗಾರಿಕೆಗಳಿಗೆ ಅಗತ್ಯವಿರುವ ಮಾನವ ಸಂಪನ್ಮೂಲವನ್ನು ತಮ್ಮ ಉದ್ದಿಮೆಗಳ ಅವಶ್ಯಕತೆಯಂತೆ ತಮ್ಮ ಸಂಸ್ಥೆಗಳಲ್ಲಿಯೇ ತರಬೇತಿ ನೀಡುವ ಮೂಲಕ ತರಬೇತಿಯ ನಂತರ ತಮ್ಮ ಕೈಗಾರಿಕೆಗಳಲ್ಲಿಯೇ ಉದ್ಯೋಗ ನೀಡುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ನಿರುದ್ಯೋಗಿ ಯುವಕ–ಯುವತಿಯರಿಗೆ ಸ್ಥಳೀಯವಾಗಿಯೇ ಉದ್ಯೋಗ ದೊರಕಿಸಿ ಅನುಕೂಲ ಕಲ್ಪಿಸಿಕೊಡುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಿದ್ದು, ಈ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಿ ಸ್ಥಳೀಯವಾಗಿ ಉದ್ಯೋಗ ಸೃಷ್ಟಿಗೆ ಕ್ರಮ ವಹಿಸಬೇಕು ಎಂದು ಅವರು ಸೂಚಿಸಿದರು.

ಡೇ–ನಲ್ಮ್ ಯೋಜನೆಯ ಎಲ್ಲ ಉಪ–ಘಟಕಗಳ ಪ್ರಗತಿ ಪರಿಶೀಲನೆ ನಡೆಸಿದ ಅವರು, ಪಿ.ಎಂ. ಸ್ವ–ನಿಧಿ ಅಡಿ ಬಾಕಿ ಇರುವ ಫಲಾನುಭವಿಗಳ ಅರ್ಜಿಗಳನ್ನು ಪಡೆದು ಸಾಲ ಮಂಜೂರಾತಿ ಹಾಗೂ ವಿತರಣೆಗೆ ವಿಳಂಬವಿಲ್ಲದೇ ತುರ್ತಾಗಿ ಕ್ರಮವಹಿಸುವಂತೆ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಗೆ ಸೂಚಿಸಿದರು. ಸ್ವ–ನಿಧಿ ಸೇ ಸಮೃದ್ಧಿ ಯೋಜನೆಯಡಿ ಎಂಟು ಸಾಮಾಜಿಕ ಭದ್ರತಾ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಒದಗಿಸಲು ಕ್ರಮ ವಹಿಸುವಂತೆ ಸಂಬಂಧಿಸಿದ ಇಲಾಖೆಗಳಿಗೆ ಹಾಗೂ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಗೆ ಸೂಚಿಸಿದರು.

2024–25ನೇ ಸಾಲಿನ ಡೇ–ನಲ್ಮ್ ಅಭಿಯಾನದಡಿ 420 ಮಹಿಳಾ ಸ್ವ–ಸಹಾಯ ಸಂಘಗಳ ರಚನೆ, 26 ಒಕ್ಕೂಟ ರಚನೆ, 171 ವೈಯಕ್ತಿಕ ಸ್ವಯಂ ಉದ್ಯೋಗ, 12 ಗುಂಪು ಉದ್ಯೋಗ, 234 ಸ್ವ–ಸಹಾಯ ಸಂಘಗಳಿಗೆ ಬ್ಯಾಂಕ್ ಲಿಂಕೇಜ್ ಗುರಿ ನಿದಿಪಡಿಸಿದ್ದು, ನಿಗದಿತ ಸಮಯದಲ್ಲಿ ಪ್ರಗತಿ ಸಾಧಿಸುವಂತೆ ಎಲ್ಲ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳಿಗೆ ಸೂಚಿಸಿದರು. ಡೇ–ನಲ್ಮ್ ಅಭಿಯಾನದಡಿ ದಿ ಅರ್ಬನ್ ಲರ್ನಿಂಗ್ ಇಂಟರ್ನ್‌ಷಿಪ್ ಪ್ರೊಗ್ರಾಮ ಯೋಜನೆಯಡಿ ಜಿಲ್ಲೆಗೆ 58 ಗುರಿ ನಿಗದಿಪಡಿಸಿದ್ದು, ನಿಗದಪಡಿಸಿದಂತೆ ಕಾಲಮಿತಿಯಲ್ಲಿಯೇ ಪ್ರಗತಿ ಸಾಧಿಸುವಂತೆ ಅವರು ಸೂಚಿಸಿದರು.

# ಬಸವನ ಅಗಲಿಕೆಗೆ ಕಂಬನಿಯ ಅಶ್ರುದರ್ಪಣ

## ಮಾದರಿಯಾದ ಪಾಲಭಾವಿ ಕುಟುಂಬದ ಪಶುಪ್ರೇಮ

* ಇಲಾಹಿ ಇ. ಜಮಖಂಡಿ.



**ಚಿಮ್ಮಡ :** ಬಹುತೇಕ ರೈತರು ತಮ್ಮ ಕೃಷಿ ಕಾಯಕಗಳಿಗೆ ಬೆನ್ನೆಲುಬಾಗಿ ದುಡಿಯುವ ಆಕಳು, ಎಮ್ಮೆ, ಎತ್ತುಗಳು ದುಡಿಯಲು ಅಸಹಾಯಕ ಸ್ಥಿತಿ ತಲುಪಿದಾಗ ಅವುಗಳನ್ನು ಕಸಾಯಿಖಾನೆಗೋ ಅಥವಾ ಗೋಶಾಲೆಗೋ ಸಾಗಿಸಿ ಕೈತೊಳೆದುಕೊಂಡು ಬಿಡುತ್ತಾರೆ ಆದರೆ ಬಾಗಲಕೋಟೆ ಜಿಲ್ಲೆಯ ರಬಕವಿ-ಬನಹಟ್ಟಿ ತಾಲೂಕಿನ ಚಿಮ್ಮಡ ಗ್ರಾಮದ ರೈತ ಪರಪ್ಪಾ ರಾಮಪ್ಪಾ ಪಾಲಭಾವಿಯವರು ನಿಸ್ಸಹಾಯಕ ಆಕಳು, ಎತ್ತುಗಳನ್ನು ಮನೆಯ ಸದಸ್ಯರಂತೆ ಸಾಕಿ, ಸಲಹಿ ಅವು ಅಗಲಿದಾಗ ಗೌರವಯುತವಾಗಿ ಅಂತಿಮ ಸಂಸ್ಕಾರ ನೆರವೇರಿಸುವ ಮೂಲಕ ಇತರ ರೈತರಿಗೆ ಮಾದರಿಯಾಗಿದ್ದಾರೆ.

ಸುಮಾರು ಇಪ್ಪತ್ನಾಲ್ಕು ವರ್ಷಗಳ ಹಿಂದೆ ಖರೀದಿಸಿದ ಎತ್ತೊಂದು ಗುರುವಾರ ಸಂಜೆ ವಯೋಸಹಜ ಅಸುನೀಗಿದಾಗ ತಮ್ಮ ಬಾಗದ ರೈತರಿಗೆಲ್ಲ ಕರೆ ಮೂಲಕ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಆಹ್ವಾನ ನೀಡಿ ಶ್ರೀ ಪ್ರಭು ಮಹಾಸ್ವಾಮಿಜಿ, ಶ್ರೀ ಜನಾರ್ಧನ ಮಹಾರಾಜರು ಹಾಗೂ ನೂರಾರು ಜನ ರೈತರ ಸಮ್ಮುಖದಲ್ಲಿ ಗೌರವಯುತವಾಗಿ ಅಂತ್ಯ ಸಂಸ್ಕಾರ ನಡೆಸಿದರು.

ಅಗಲಿದ ಬಸವನಿಗೆ ತಮ್ಮ ಮನೆಯ ಹಿರಿಯರ ಸ್ಥಾನಮಾನ ನೀಡಿದ್ದ ಪಾಲಭಾವಿ ದಂಪತಿಗಳು ಈ ಹಿರಿಎತ್ತನ್ನು ಮನೆಯ ಸದಸ್ಯರಂತೆಯೇ ಪ್ರೀತಿಯಿಂದ ಸಲಹುತಿದ್ದರು,

ಈಗಾಗಲೇ ಐದು ಹಿರಿ ಎತ್ತುಗಳ ಸಮಾಧಿಗಳು ಪಾಲಭಾವಿ ದಂಪತಿಗಳ ಮನೆಯ ಆವರಣದಲ್ಲಿದ್ದು ಪ್ರತೀವರ್ಷ ಬಸವ ಜಯಂತಿಯಂದು ಎಲ್ಲ ಸಮಾಧಿಗಳಿಗೆ ವಿಶೇಷ ಪೂಜೆ ಹಾಗೂ ಪ್ರಸಾದ ವ್ಯವಸ್ಥೆ ಮಾಡಿಸುವ ಮೂಲಕ ತಮ್ಮಲ್ಲಿ ಒಬ್ಬರಾಗಿ ದುಡಿದ ಮೂಕಪ್ರಾಣಗಳಿಗೆ ಗೌರವ ತೋರುತಿದ್ದಾರೆ.

ತಂದೆಯ ಕಾಲದಿಂದಲೂ ಇದುವರೆಗೆ ಯಾವುದೇ ಆಕಳು, ಎತ್ತುಗಳನ್ನು ಕಸಾಯಿಖಾನೆ, ಗೋಶಾಲೆಗಳಿಗೆ ನಿಡಿದರೆ ಮನೆಯ ಸದಸ್ಯರನ್ನು ವೃದ್ದಾಶ್ರಮಕ್ಕೆ ಸೇರಿಸಿದಂತಾಗುತ್ತದೆ ಎಂಬ ಭಾವನೆ ಹೊಂದಿರುವ ಪರಪ್ಪಾ ಪಾಲಭಾವಿಯವರು ತಮ್ಮ ಮಕ್ಕಳಿಗೂ ಈ ಪರಂಪರೆ ಮುಂದುವರಿಸುವಂತೆ ಸಲಹೆ ನೀಡಿದ್ದಾಗಿ ತಿಳಿಸಿದ್ದಾರೆ.

**ಇಪ್ಪತ್ತರಿಂದ ಮೂವತ್ತು ವರ್ಷಗಳ ಕಾಲ ನಮ್ಮೊಂದಿಗೆ ಜೊತೆಯಾಗಿ ದುಡಿದು ನಮಗೆ ಅನ್ನ, ಆಶೀರ್ವಾದ ನೀಡಿದ ಮೂಕ ಪ್ರಾಣಿಗಳನ್ನು ಅವು ದುಡಿಯುವುದನ್ನು ನಿಲ್ಲಿಸಿವೆ ಎಂಬ ಒಂದೇ ಕಾರಣಕ್ಕಾಗಿ ನಾವು ಅವುಗಳನ್ನು ಅಗಲಿಸಿದರೆ, ಹಣಕ್ಕಾಗಿ ಕಸಾಯಿಖಾನೆಗೆ ಮಾರಾಟ ಮಾಡಿದರೆ ನಮ್ಮಂಥ ಕಠೋರ ಹೃದಯದವರು ಯಾರಿದ್ದಾರೆ. ಬಸವನ್ನು ದೇವರೆಂದು ಭಾವಿಸಿ ಪೂಜಿಸುವ ನಾವು, ಅವುಗಳನ್ನು ಬದುಕಿರುವವರೆಗೂ ಸಾಕದಿದ್ದರೆ ಇದು ನಮ್ಮ ರೈತ ಕುಲಕ್ಕೆ ಅವಮಾನಕಾರಿ, ದೇಶದ ಸಂಸ್ಕೃತಿಗೇ ವಿರುದ್ದವಾದದ್ದು.**

**। ಪರಪ್ಪಾ ರಾಮಪ್ಪಾ ಪಾಲಭಾವಿ**
**ಪ್ರಗತಿಪರ ರೈತರು ಚಿಮ್ಮಡ.**

# ಭ್ರಷ್ಟಾಚಾರ ಮುಕ್ತ ಭಾರತ ನಿರ್ಮಾಣವಾಗಬೇಕು: ಪತ್ರಕರ್ತ ಮಲ್ಲಪ್ಪ ಜೋತಾವರ




**ಮೂಡಲಗಿ :** ಭ್ರಷ್ಟಾಚಾರಮುಕ್ತ, ಸ್ವಚ್ಛ ಹಾಗೂ ಸಧೃಢ, ಸಶಕ್ತ ಭಾರತ ನಿರ್ಮಾಣವಾಗಬೇಕು. ಭ್ರಷ್ಟಾಚಾರ ನಮ್ಮ ದೇಶಕ್ಕೆ ಅಂಟಿದ ಕಳಂಕ. ಯುವಜನತೆ ಭ್ರಷ್ಟಾಚಾರ ವಿರೋಧಿ ಆಂದೋಲನವನ್ನು ಕೈಗೊಂಡು ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯ ಮಾಡಬೇಕು ಎಂದು ಗೋಕಾಕದ ಹೇ ಸೀತಾರಾಮ ವಾಹಿನಿಯ ಮುಖ್ಯಸ್ಥ, ಪರ್ತಕರ್ತ ಮಲ್ಲಪ್ಪ ಜೋತಾವರ ಕರೆ ನೀಡಿದರು.

ಕಲ್ಲೋಳಿ ಪಟ್ಟಣದಲ್ಲಿ ನೆಹರು ಯುವ ಕೇಂದ್ರ ಬೆಳಗಾವಿ, ಕಲ್ಲೋಳಿಯ ವೀರಭದ್ರೇಶ್ವರ ಜಾನಪದ ಮತ್ತು ಕಲಾಪೋಷಕ ಸಂಘ ಹಾಗೂ ಎಸ್. ಆರ್.ಇ.ಎಸ್. ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ, ಎನ್ನೆಸ್ಸೆಸ್ ಘಟಕಗಳ ಸಂಯುಕ್ತ ಆಶ್ರಯದಲ್ಲಿ ಶನಿವಾರ ಜರುಗಿದ 2024-25 ನೇ ಸಾಲಿನ ವಿಚಕ್ಷಣ ದಿನಾಚರಣೆ ಹಾಗೂ ಫಿಟ್ ಇಂಡಿಯಾ ಸ್ವಚ್ಛತಾ ಫ್ರೀಡಂ ರನ್ 5.0 ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಪ್ರಾಮಾಣಿಕತೆ ಮತ್ತು ನಿಷ್ಠೆಯನ್ನು ನಮ್ಮಲ್ಲಿ ಅಳವಡಿಸಿಕೊಂಡು ಲಂಚ ತೆಗೆದುಕೊಳ್ಳುವುದಿಲ್ಲ ಮತ್ತು ಕೊಡುವುದಿಲ್ಲ ಎಂಬ ಶಪತ ಮಾಡೋಣ ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಎಸ್.ಆರ್.ಇ. ಸಂಸ್ಥೆಯ ಚೇರಮನ್ನ ಬಸಗೌಡ ಪಾಟೀಲ ಅವರು ಮಾತನಾಡಿ, ಸಮಾಜವನ್ನು ಸರಿದಾರಿಯಲ್ಲಿ ನಡೆಸುವ ಜವಾಬ್ದಾರಿ ಯುವಕರ ಮೇಲಿದೆ.ಸರ್ಕಾರಿ ಕೆಲಸ ಮಾಡಲು ಹಿಂದೇಟು ಹಾಕುವವರ ವಿರುದ್ಧ, ಲಂಚದ ಬೇಡಿಕೆಯಿಡುವವರ ವಿರುದ್ಧ, ಅಕ್ರಮ ಸಂಪತ್ತು ಹೊಂದಿರುವವರ ವಿರುದ್ಧ ದೂರು ಸಲ್ಲಿಸಬೇಕು. ಲಂಚ ಪಡೆದುಕೊಳ್ಳುವುದು, ಲಂಚ ನೀಡುವುದು ಕಾನೂನು ಪ್ರಕಾರ ಅಪರಾಧ. ಇದರಲ್ಲಿ ಭಾಗಿಯಾದವರಿಗೆ ಜೈಲು ಶಿಕ್ಷೆಯಾಗುತ್ತದೆ ಹಾಗೂ ಕೆಲಸದಿಂದ ವಜಾಗೊಳಿಸಬಹುದು. ಈ ಹಿನ್ನೆಲೆಯಲ್ಲಿ ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಪ್ರಯತ್ನ ವಿದ್ಯಾರ್ಥಿಗಳಿಂದ ಆಗಬೇಕಿದೆ.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಾಚಾರ್ಯ ಡಾ. ಸುರೇಶ ಹನಗಂಡಿ, ಭ್ರಷ್ಟಾಚಾರವೆಂಬ ಸಾಮಾಜಿಕ ಪಿಡುಗು ಭಾರತದ ಅಭಿವೃದ್ಧಿಯನ್ನು ಕುಂಠಿತಗೊಳಿಸುತ್ತಿದ್ದು, ಅಭಿವೃದ್ಧಿ ಹೊಂದಿದ ರಾಷ್ಟ್ರದ ನಿರ್ಮಾಣಕ್ಕಾಗಿ ಭ್ರಷ್ಟಾಚಾರದ ಸಂಪೂರ್ಣ ನಿರ್ಮೂಲನೆ ಅತ್ಯಗತ್ಯ ಎಂದರು.

ಕಲ್ಲೋಳಿಯ ವೀರಭದ್ರೇಶ್ವರ ಜಾನಪದ ಮತ್ತು ಕಲಾ ಪೋಷಕ ಯುವಕ ಸಂಘದ ಅಧ್ಯಕ್ಷ ಗುಳಪ್ಪ ವಿಜಯನಗರ ಪ್ರಾಸ್ತವಿಕ ಮಾತುಗಳನ್ನಾಡಿದರು.

ಕಾಲೇಜಿನ ಐಕ್ಯೂಎಸಿ ಘಟಕದ ಕಾರ್ಯದರ್ಶಿ ಡಾ. ಎಂ.ಬಿ. ಕುಲಮೂರ, ಎನ್ನೆಸ್ಸೆಸ್ ಕಾರ್ಯಕ್ರಮಾಧಿಕಾರಿ ಶಂಕರ ನಿಂಗನೂರ, ಬಿ.ಬಿ. ವಾಲಿ, ಬೋಧಕ/ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರೊ. ಆರ್. ಎನ್. ತೋಟಗಿ ನಿರೂಪಿಸಿದರು, ಸಂಜು ಮರಗನ್ನವರ ಪ್ರಾರ್ಥಿಸಿದರು, ಡಾ. ಕೆ.ಎಸ್. ಪರವ್ವಗೋಳ ಸ್ವಾಗತಿಸಿದರು, ಡಿ.ಎಸ್. ಹುಗ್ಗಿ ಪ್ರತಿಜ್ಞಾ ವಿಧಿ ಬೋಧಿಸಿದರು, ಎಂ.ಬಿ. ಜಾಲಗಾರ ವಂದಿಸಿದರು.

# ತಂಬಾಕಿನಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಅರಿವಿರಲಿ: ಶ್ವೇತಾ ಪಾಟೀಲ




**ಮೂಡಲಗಿ :** ಭಾರತದಲ್ಲಿ ಅಸಂಕ್ರಾಮಿಕ ರೋಗದಿಂದ ಸಾಯುವವರ ಸಂಖ್ಯೆ ಅತಿಯಾಗಿ ಹೆಚ್ಚುತ್ತಿದ್ದು ಅದಕ್ಕೆ ಮುಖ್ಯ ಕಾರಣಗಳಾದ ತಂಬಾಕು, ಸ್ಟಾರ್ ಗುಟಕಾ ಸೇವನೆ, ಮದ್ಯಪಾನ, ಧೂಮಪಾನ ಚಟಗಳಿಂದ ಯುವ ಜನತೆ ಮುಕ್ತವಾಗಬೇಕು ಎಂದು ಜಿಲ್ಲಾ ಆರೋಗ್ಯ ಇಲಾಖೆಯ ಸಲಹೆಗಾರರು ಶ್ವೇತಾ ಪಾಟೀಲ ಅಭಿಪ್ರಾಯ ಪಟ್ಟರು.

ಬೆಳಗಾವಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,ಜಿಲ್ಲಾ ಸರ್ವೇಕ್ಷಣ ಘಟಕ, ರಾಷ್ಟ್ರೀಯ ತಂಬಾಕು ನಿಯಂತ್ರಣ ಘಟಕ ಹಾಗೂ ಮೂಡಲಗಿ ಶಿಕ್ಷನ ಸಂಸ್ಥೆಯ ಕಲಾ,ವಾಣಿಜ್ಯ ಹಾಗೂ ಬಿ.ಸಿ.ಎ.ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಯುಥ್ ರೆಡ್ ಕ್ರಾಸ್ ಘಟಕ,ರೋವರ್ಸ ಹಾಗೂ ಸ್ಕೌಟ್ಸ ಘಟಕಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ತಂಬಾಕು ಹಾಗೂ ತಂಬಾಕು ಉತ್ಪನ್ನಗಳಿಂದ ಉಂಟಾಗುವ ದುಷ್ಪರಿಣಾಮಗಳ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು

ಹೃದಯ ಸ್ಥಂಬನ, ಮಧುಮೇಹ ಕಾಮಾಲೆ, ಪಾರ್ಶ್ವ ವಾಯು, ಇವುಗಳು ಅಸಂಕ್ರಾಮಿಕ ರೋಗಗಲಾಗಿದ್ದು ತಂಬಾಕು ಹಾಗೂ ತಂಬಾಕು ಉತ್ಪನ್ನಗಳ ಸೇವನೆಯಿಂದ ಕ್ಯಾನ್ಸರ್ ರೋಗದೊಂದಿಗೆ ಅಸಂಕ್ರಾಮಿಕ ರೋಗಗಳು ಸಹ ಉಲ್ಬಣಗೊಳ್ಳುತ್ತವೆ ಎಂದರು.

ಸಮಾರಂಭದ ಅಧ್ಯಕ್ಷ ಸ್ಥಾನವನ್ನು ವಹಿಸಿದ ಪ್ರಾಚಾರ್ಯ ಪ್ರೊ.ಜಿ.ವ್ಹಿ.ನಾಗರಾಜ್ ಅವರು ಮಾತನಾಡಿ ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು ಸದೃಡ ಕಾಯವನ್ನು ಹೊಂದಿ ಸದೃಡ ಭಾರತವನ್ನು ಕಟ್ಟಬೇಕಾದ ಅವಶ್ಯಕತೆ ಹಿಂದೆಂದಿಗಿಂತಲೂ ಇಂದಿನ ಕಾಲಕ್ಕೆ ಅವಶ್ಯಕವಾಗಿದೆ ಎಂದರು

ಸಮಾರಂಭದಲ್ಲಿ ಕಲ್ಮೇಶ ಇಂಗಳೆ, ರಮೇಶ ಖಾನಪ್ಪಗೋಳ, ಸವಿತಾ ಕೊತ್ತಲ, ಪ್ರೊ. ಎಸ್. ಕೆ.ಸವಸುದ್ದಿ, ಪ್ರೊ.ಎಸ್. ಎಮ್ ಗುಜಗೊಂಡ,ಡಾ.ವ್ಹಿ. ಆರ್. ದೇವರಡ್ಡಿ, ಡಾ.ಬಿ.ಎಂ. ಬರಗಾಲಿ. ಮನೋಹೆರ ಲಮಾಣಿ, ಅರ್ಜುನ ಗಸ್ತಿ, ಮೂಡಲಗಿಯ ಸಮುದಾಯ ಆರೋಗ್ಯ ಇಲಾಖೆಯ ಗೀತಾ ಡೋಣಿ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕವಿತಾ ರಾಜಣ್ಣವರ ತಂಬಾಕು ಕುರಿತಾ ಪ್ರತಿಜ್ಞಾ ವಿಧಿ ಬೋಧಿಸಿದರು. ಆರಂಭದಲ್ಲಿ ಪ್ರೊ. ಎಸ್.ಸಿ.ಮಂಟೂರು ಸ್ವಾಗತಿಸಿದರು. ಪ್ರೊ. ಪ್ರೀತಿ ಬೆಳಗಲಿ ಕಾರ್ಯಕ್ರಮ ನೀರೂಪಿಸಿದರು. ಕವಿತಾ ರಾಜಣ್ಣವರ ವಂದನಾರ್ಪಣೆ ಮಾಡಿದರು.

# ರಾಜ್ಯಮಟ್ಟದ ರಾಷ್ಟ್ರಕವಿ ಜಿ.ಎಸ್. ಶಿವರುದ್ರಪ್ಪ ಪ್ರಶಸ್ತಿಗೆ ಆಯ್ಕೆ



**ಮೂಡಲಗಿ :** ಬೆಂಗಳೂರು ಅಕ್ಷರನಾದ ಕಲೆ. ಸಾಹಿತ್ಯ. ಸಾಂಸ್ಕೃತಿಕ ವೇದಿಕೆ ಮತ್ತು ಅಕ್ಷರನಾದ ಪಬ್ಲಿಕೇಶನ್ ಶ್ರೀ ಎ. ಎಸ್. ಟಿ.ಆರ್.ವತಿಯಿಂದ ನೀಡಲಾಗುವ ರಾಜ್ಯಮಟ್ಟದ ರಾಷ್ಟ್ರಕವಿ ಜಿ. ಎಸ್.ಶಿವರುದ್ರಪ್ಪ ಪ್ರಶಸ್ತಿಗೆ ಮೂಡಲಗಿಯ ಕಾವ್ಯ ಕುಸುಮ ಎಂದೆ ಪ್ರಖ್ಯಾತಿ ಹೊಂದಿರುವ ಶ್ರೀಮತಿ ಶಶಿರೇಖಾ ಸುಭಾಷ್ ಬೆಳ್ಳಕ್ಕಿ ಅವರು ಭಾ ಜನರಾಗಿದ್ದಾರೆ.

ಸಕಲಕಲಾವಲ್ಲದೆ, ಸಾಕ್ಷಾತ್ ಸರಸ್ವತಿಯವರ ಪುತ್ರಿ, ಪ್ರತಿಭಾ ಕಾರಂಜಿ, ಕಾವ್ಯ ಸಖಿ, ಉದಯೋನ್ಮುಖ ಬರಹಗಾರ್ತಿ, ಕನ್ನಡ ಸಾಹಿತ್ಯ ಪರಿಷತ್ತು ಮೂಡಲಗಿ ಘಟಕ ಹಾಗೂ ಜ್ಞಾನ ದೀಪ್ತಿ ಫೌಂಡೇಶನ್ ಮೂಡಲಗಿ ಇದರ ಪದಾಧಿಕಾರಿಯಾಗಿ ಸಾಹಿತ್ಯದ ಸಾರಥಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಸಾಹಿತ್ಯ ಕ್ಷೇತ್ರದಲ್ಲಿನ ಕೃಷಿ ಹಾಗೂ ಇವರ ಸಾಮಾಜಿಕ ಕಾರ್ಯಗಳನ್ನು ಗುರುತಿಸಿ ಇವರಿಗೆ ಈ ಪ್ರಶಸ್ತಿಯನ್ನು ಇದೇ ಭಾನುವಾರದಂದು ಬೆಂಗಳೂರಿನ ಚಾಮರಾಜಪೇಟೆಯ ಕುವೆಂಪು ಸಭಾಂಗಣದಲ್ಲಿ ನಡೆಯುವ ಕವಿ ನುಡಿ ಸಂಭ್ರಮೋತ್ಸವ 02 ಸಮಾರಂಭದಲ್ಲಿ ಈ ಪ್ರಶಸ್ತಿ ನೀಡಲಾಗುವುದೆಂದು ಅಕ್ಷರನಾದ ಕಲೆ ಸಾಹಿತ್ಯ ಸಾಂಸ್ಕೃತಿಕ ವೇದಿಕೆ ಯ ಅಧ್ಯಕ್ಷರಾದ ಡಾಕ್ಟರ್ ಶೃತಿ ಮಧುಸೂದನ್ ರವರು ತಿಳಿಸಿದ್ದಾರೆ.

# ಪಟಾಕಿ ಅಂಗಡಿಗಳಿಗೆ ಪಿಎಸ್ಐ ಬೇಟಿ, ಪರಿಶೀಲನೆ ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮ-ಎಚ್ಚರಿಕೆ



**ತೇರದಾಳ :** ದೀಪಾವಳಿ ಹಬ್ಬಕ್ಕೆ ಮಾರಾಟ ಮಾಡುವ ಪಟಾಕಿಗಳು ಹಸಿರು ಪಟಾಕಿ ಆಗಿರಬೇಕು. ಹಾಗೂ ಜಿಲ್ಲಾಧಿಕಾರಿಗಳು ಸೂಚಿಸಿರುವ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಇಲ್ಲದಿದ್ದರೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಪಟಾಕಿ ಅಂಗಡಿಕಾರರಿಗೆ ಪಿಎಸ್ಐ ಅಪ್ಪಣ್ಣ ಐಗಳಿ ಎಚ್ಚರಿಕೆ ನೀಡಿದರು.

ಶನಿವಾರ ಇಲ್ಲಿನ ಪಟಾಕಿ ಅಂಗಡಿ ಹಾಗೂ ಗೋದಾಮುಗಳಿಗೆ ಬೇಟಿ ನೀಡಿ ಪಟಾಕಿ ಹಾಗೂ ದಾಖಲೆಗಳನ್ನು ಪರಿಶೀಲಿಸಿ ಅಂಗಡಿಕಾರರಿಗೆ ಹೇಳಿದರು.

ಈಗಾಗಲೇ ಜಿಲ್ಲಾಧಿಕಾರಿಗಳು ಪಟಾಕಿ ವ್ಯಾಪಾರಸ್ಥರ ಸಭೆ ನಡೆಸಿ ಹಲವು ಸಲಹೆ ಸೂಚನೆಯ ಜತೆಗೆ ಮಾರ್ಗಸೂಚಿ ಆದೇಶ ನೀಡಿದ್ದಾರೆ. ಆದ್ದರಿಂದ ಹಸಿರು ಪಟಾಕಿ ಹೊರತು ಪಡಿಸಿ ಬೇರೆ ಪಟಾಕಿಗಳನ್ನು ಮಾರಾಟ ಮಾಡುವಂತಿಲ್ಲ. ಹಾಗೂ ಜನ ವಸತಿ ಪ್ರದೇಶಗಳಲ್ಲಿ ಪಟಾಕಿ ಹಚ್ಚಲು ನಿರ್ಬಂಧ ಹೇರಲಾಗಿದೆ. ಯಾವುದೇ ಅನಾಹುತಕ್ಕೆ ಅವಕಾಶ ನೀಡಬಾರದು ಎಂದು ತಾಕೀತು ಮಾಡಿದರು. ನಾಗರಾಜ ಕಾಂಬಳೆ, ವಿವೇಕ ಸುವರ್ಣಖಂಡಿ, ಪಟಾಕಿ ವ್ಯಾಪಾರಸ್ಥರಾದ ಶ್ರೀಶೈಲ ಪೂಜಾರಿ(ಗುರವ), ಶ್ರೀಶೈಲ ಮುಕರಿ, ಸೊಟ್ಟಿ ಇದ್ದರು.

## ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ 3ನೇ ವರ್ಷದ ಪುಣ್ಯ ಸ್ಮರಣೆ ಅಂಗವಾಗಿ

# ರಕ್ತದಾನ ಶಿಬಿರ, ಉಚಿತ ಆರೋಗ್ಯ ತಪಾಸಣೆ, ಹಾಗೂ ಅನ್ನ ಸಂತರ್ಪಣೆ



**ಕೆ.ಆರ್.ಪೇಟೆ :** ಕರ್ನಾಟಕ ರತ್ನ, ಪವರ್ ಸ್ಟಾರ್ ಪುನೀತ್ ರಾಜ್ ಕುಮಾರ್ ಅವರ 03ನೇ ವರ್ಷದ ಪುಣ್ಯ ಸ್ಮರಣೆ ಕಾರ್ಯಕ್ರಮವು ಇಂದು ರಾಜ್ಯದ ಮಾಜಿಸಚಿವ ಡಾ. ನಾರಾಯಣಗೌಡರ ನೇತೃತ್ವದಲ್ಲಿ ಅರ್ಥ ಪೂರ್ಣವಾಗಿ ನಡೆಯಿತು

ಕೆ.ಆರ್.ಪೇಟೆಪಟ್ಟಣದಮೈಸೂರುಚನ್ನರಾಯಪಟ್ಟಣ ರಸ್ತೆಯ ಎಂ.ಕೆ.ಬೊಮ್ಮೇಗೌಡ ವೃತ್ತದಲ್ಲಿ ಮಾಜಿ ಸಚಿವ ಡಾ. ನಾರಾಯಣಗೌಡರ ಸಹಕಾರದಿಂದ ಎತ್ತರದ ಕಟ್ಟೆಯ ಮೇಲೆ ಪ್ರತಿಷ್ಠಾಪಿಸಿರುವ 06ಅಡಿ ಎತ್ತರದ ಪುನೀತ್ ರಾಜ್ ಕುಮಾರ್ ಕಂಚಿನ ಪ್ರತಿಮೆಗೆ ಆದಿಚುಂಚನಗಿರಿಯ ಹೇಮಗಿರಿ ಶಾಖಾ ಮಠದ ಗೌರವಕಾರ್ಯದರ್ಶಿಡಾ.ಜೆ.ಎನ್.ರಾಮಕೃಷ್ಣೆಗೌಡ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಕೆ. ಶ್ರೀನಿವಾಸ್, ಕಾಮಿಡಿ ಖಿಲಾಡಿಗಳು ಖ್ಯಾತಿಯ ಮಡೆನೂರು ಮನು, ಪುರಸಭೆ ಅಧ್ಯಕ್ಷೆ ಪಂಕಜಾ, ಮಾಜಿಶಾಸಕಡಾ.ನಾರಾಯಣಗೌಡ,ಕೃಷ್ಣರಾಜಪೇಟೆ ತಾಲೂಕುಅಪ್ಪುಯುವಸಾಮ್ರಾಜ್ಯಸೇವಾಟ್ರಸ್ಟ್ಅಧ್ಯಕ್ಷ ಕೆ.ಎಲ್. ಮಹೇಶ್, ಜಯ ಕರ್ನಾಟಕ ಸಂಘಟನೆ ತಾಲೂಕು ಅಧ್ಯಕ್ಷ ಸೋಮಶೇಖರ್ ವಿಶೇಷ ಪೂಜೆ ಮಾಡಿ ಪುಷ್ಪ ನಮನ ಸಲ್ಲಿಸಿದರು.

ಮಾಜಿಸಚಿವಡಾ.ನಾರಾಯಣಗೌಡಅವರುಪುನೀತ್ ಅಭಿಮಾನಿಗಳುಹಾಗೂಸಾರ್ವಜನಿಕರನ್ನುಉದ್ದೇಶಿಸಿ ಮಾತನಾಡಿ ಪುನೀತ್ ರಾಜ್ ಕುಮಾರ್ ಅವರು ನಮ್ಮನ್ನಗಲಿ ಮೂರು ವರ್ಷಗಳು ಕಳೆಯುತ್ತಿದ್ದರೂ ಅವರ ನೆನಪು ಇಂದಿಗೂ ಕನ್ನಡಿಗರ ಮನ ಹಾಗೂ ಮನೆಗಳಲ್ಲಿ ಚಿರಸ್ಥಾಯಿಯಾಗಿ ಇಂದಿಗೂ ಹಸಿರಾಗಿ ಉಳಿದಿದೆ. ತಮ್ಮ ತಂದೆಯವರಾದ ಕನ್ನಡದ ವರನಟ ಡಾ. ರಾಜಕುಮಾರ್ ಅವರಿಗೂ ಮೀರಿದ ಸಾಧನೆ ಮಾಡಿದ ಅಪ್ಪು ಅಭಿಮಾನಿಗಳು ನಡೆಸುತ್ತಿರುವ ಸಾಮಾಜಿಕ ಕಾರ್ಯ ಚಟುವಟಿಕೆಗಳು ಚಿರ ಸ್ಥಾಯಿಯಾಗಿಉಳಿದಿವೆ. ಇಂದುರಕ್ತದಾನ,ಆರೋಗ್ಯ ತಪಾಸಣೆ ಹಾಗೂ ಅನ್ನದಾನ ಕಾರ್ಯಕ್ರಮಗಳು ಶ್ರೀ ಸಾಮಾನ್ಯರ ಹೃದಯ ಗೆದ್ದಿವೆ ಎಂದು ನಾರಾಯ-ಣಗೌಡ ಹೇಳಿದರು. ಇದೆ ಸಂದರ್ಭದಲ್ಲಿ ಕಾಮಿಡಿ ಖಿಲಾಡಿಗಳು ಖ್ಯಾತಿಯ ಮಡೆನೂರು ಮನು ಅಭಿನಯದ ಕುಲದಲ್ಲಿ ಕೀಳ್ಯಾವುದೋ ಕನ್ನಡ ಚಲನ ಚಿತ್ರದ ಪೋಸ್ಟರ್ ಅನ್ನು ಅತಿಥಿಗಳು ಬಿಡುಗಡೆ ಮಾಡಿದರು. ಸಾವಿರಾರು ಸಂಖ್ಯೆಯಲ್ಲಿ ಜಮಾಯಿಸಿದ್ದ ಅಭಿಮಾನಿಗಳು ಸರತಿಯ ಸಾಲಿನಲ್ಲಿ ನಿಂತು ಅನ್ನ ಪ್ರಸಾದ ಸ್ವೀಕರಿಸಿದರು. ನೂರಕ್ಕೂ ಹೆಚ್ಚಿನ ಯುವ ಜನರು ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡಿ ಮಾದರಿಯಾದರು.

# ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರಿಂದ ಜಿಲ್ಲಾ ಕ್ರೀಡಾಂಗಣ-ರಂಗಮಂದಿರ ಹಾಗೂ ಈಜುಕೊಳಕ್ಕೆ ಭೇಟಿ: ಪರಿಶೀಲನೆ



**ವಿಜಯಪುರ :** ಶುಕ್ರವಾರ ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರ ಹಾಗೂ ನಗರದ ಜಿಲ್ಲಾ ಪಂಚಾಯತ್ ಹತ್ತಿರವಿರುವ ಈಜುಕೊಳಕ್ಕೆ (ಸ್ವಿಮ್ಮಿಂಗ್ ಫೂಲ್) ಜಿಲ್ಲಾಧಿಕಾರಿ ಟಿ. ಭೂಬಾಲನ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣ-ಕ್ಕೆ ಭೇಟಿ ನೀಡಿ, ಅಭ್ಯಾಸಕ್ಕೆ ಆಗಮಿಸುವ ಕ್ರೀಡಾಪಟುಗಳ ಸುರಕ್ಷತೆಗೆ ಆದ್ಯತೆ ನೀಡಬೇಕು. ಕುಡಿಯುವ ನೀರಿನ ವ್ಯವಸ್ಥೆ, ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಬೇಕು. ಮಳೆ ನೀರು ಕ್ರೀಡಾಂಗಣದಲ್ಲಿ ನಿಲ್ಲದಂತೆ ನೋಡಿ-ಕೊಂಡು ಸ್ವಚ್ಚತೆಗೆ ಆದ್ಯತೆ ನೀಡಬೇಕು. ಕ್ರೀಡಾಂಗಣ ದೊಡ್ಡದಾಗಿರುವುದರಿಂದ ಹೆಚ್ಚಿನ ಸ್ವಚ್ಚತಾ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಕ್ರಮವಹಿಸಬೇಕು. ಕ್ರೀಡಾಂಗಣದ ಆವರಣದಲ್ಲಿರುವ ಅಂಗಡಿಗಳ ಬಾಡಿಗೆ ದರ ಪರಿಷ್ಕರಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ನಗರದ ಕಂದಗಲ್ ಹನುಮಂತರಾಯ ರಂಗಮಂದಿರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ರಂಗಮಂದಿರದ ನವೀಕರಣಕ್ಕಾಗಿ ಕಾಮಗಾರಿ ಬಗ್ಗೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿದ ಅವರು, ರಂಗಮಂದಿರವನ್ನು ಆಕರ್ಷಣೀಯವಾಗಿಸುವ ನಿಟ್ಟಿನಲ್ಲಿ ಪೇಟಿಂಗ್, ಗೋಡೆ ಚಿತ್ರ ಬರೆಯಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದ ಅವರು, ಆವರಣದಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವಂತೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಹತ್ತಿರವಿರುವ ಈಜುಕೊಳ್ಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಅಗತ್ಯ ಸಲಹೆ-ಸೂಚನೆಗಳನ್ನು ನೀಡಿದರು.

ಈ ವೇಳೆ ಲೋಕೋಪಯೋಗಿ ಕಾರ್ಯನಿರ್ವಾಹಕ ಅಭಿಯಂತರ ಸಿ. ಬಿ. ಚಿಕ್ಕಲಗಿ, ನಿರ್ಮಿತಿ ಕೇಂದ್ರದ ಗೋಪಿನಾಥ ಮಲಜಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರಾಜಶೇಖರ ದೈವಾಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಂತೋಷ ಭೋವಿ ಉಪಸ್ಥಿತರಿದ್ದರು.



**ಕೊಪ್ಪಳ : ಕೊಪ್ಪಳ ನಗರಕ್ಕೆ ಮಂಗಳವಾರದಂದು ಭೇಟಿ ನೀಡಿದ ಯಾದಗಿರಿ ಜಿಲ್ಲೆ ಸುರಪುರ ತಾಲೂಕಿನ ಕೆಂಭಾವಿ ಪಟ್ಟಣದ ಖಾಜಿ ಕುಟುಂಬದ ಹಿರಿಯ ನಿವಾಸಿ ಮುಸ್ಲಿಂ ಸಮಾಜದ ಮುಖಂಡ ಹಾಜಿ ಸೈಯದ್ ಖಾಜಾ ಹುಸೇನ್ ಖಾಜಿ ರವರನ್ನು ಕೊಪ್ಪಳ ದ ಹಿರಿಯ ಪತ್ರಕರ್ತ ಎಂ ಸಾಧಿಕ್ ಅಲಿ ಯವರು ಸನ್ಮಾನಿಸಿ ಆತ್ಮೀಯವಾಗಿ ಬರಮಾಡಿಕೊಂಡರು, ಸದರಿಯವರು ವಿದೇಶದಲ್ಲಿ ಕಾರ್ಯನಿರ್ವಹಿಸುತ್ತಿದ್ದು ತಾಯಿನಾಡಿಗೆ ಆಗಮಿಸಿದ ಈ ಶುಭ ಸಂದರ್ಭದಲ್ಲಿ ಅವರನ್ನು ಸನ್ಮಾನಿಸಿ ಸ್ವಾಗತಿಸಲಾಯಿತು, ಈ ಸಂದರ್ಭದಲ್ಲಿ ಅವರೊಂದಿಗೆ ಸೈಯದ್ ರಫೀಕ್ ಹುಸೇನ್ ಪೀರಾ ರವರು ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.**

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State